# ತುಂಗ ಬಿಂಬ

ಸತ್ಯ ಮತ್ತು ಧೈರ್ಯದ ಧ್ವನಿ

TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923

ಸಂಪುಟ: Vol: 04 ಸಂಚಿಕೆ: Issue: 123 ರಾಯಚೂರು Raichur 25-10-2026 ಭಾನುವಾರ Sunday ಪುಟ: Page: 04 ಬೆಲೆ: Price: ₹ 2.00

Postal Reg No.: RCR/L/RNP/95/2025-27 tungabimba@gmail.com

ಸಂಪಾದಕರು : ಗುರುರಾಜ ಕೆ Editor: Gururaja K 98863 85685







## ಸ್ಮಶಾನದಲ್ಲಿ ಹೂತ ಶವಗಳ ಅವಶೇಷ ಸಾಗಾಟ ಆರೋಪ: ಮೂವರು ಪೊಲೀಸ್ ವಶಕ್ಕೆ

ರಾಯಚೂರು: ನಗರದ ಮಂತ್ರಾಲಯ ರಸ್ತೆಯ ಮಾರುತಿ ನಗರ ಸ್ಮಶಾನದಲ್ಲಿ ಹೂಳಲಾಗಿದ್ದ ಶವಗಳ ಅವಶೇಷಗಳನ್ನು ಅನಧಿಕೃತವಾಗಿ ಹೊರತೆಗೆದು ಸಾಗಿಸುತ್ತಿದ್ದ ಆರೋಪ ಕೇಳಿಬಂದಿದ್ದು, ಪ್ರಕರಣಕ್ಕೆ ಸಂಬಂಧಿಸಿದಂತೆ ಮೂವರನ್ನು ನೇತಾಜಿ ನಗರ ಠಾಣೆ ಪೊಲೀಸರು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ.

ಸ್ಮಶಾನದಲ್ಲಿ ಕೆಲಸ ಮಾಡುತ್ತಿರುವ ಹನುಮಯ್ಯ ತಳವಾರ ಹಾಗೂ ನವೋದಯ ವೈದ್ಯಕೀಯ ಕಾಲೇಜಿನ ಸಿಬ್ಬಂದಿ ಎಂದು ಹೇಳಲಾದ ರಾಜು ಮತ್ತು ಅಫ್ಸರ್ ಎಂಬುವವರು ಪೊಲೀಸರ ವಶದಲ್ಲಿದ್ದಾರೆ. ಹೂಳಲಾಗಿದ್ದ ಶವಗಳ ಮೂಳೆಗಳು ಸೇರಿದಂತೆ ದೇಹದ ಇತರ ಭಾಗಗಳನ್ನು ವೈದ್ಯಕೀಯ ಸಂಶೋಧನೆಗಾಗಿ ಸಾಗಿಸಲಾಗುತ್ತಿತ್ತು ಎಂಬ ಶಂಕೆ ವ್ಯಕ್ತವಾಗಿದೆ.

ಸ್ಮಶಾನದಿಂದ ಶವಗಳ ಅವಶೇಷಗಳನ್ನು ತೆಗೆದುಕೊಂಡು ಹೋಗುತ್ತಿರುವ ಬಗ್ಗೆ ಸ್ಥಳೀಯ ನಿವಾಸಿಗಳು ಪೊಲೀಸರಿಗೆ ಮಾಹಿತಿ ನೀಡಿದ್ದರು. ದೂರಿನ ಮೇರೆಗೆ ಸ್ಥಳಕ್ಕೆ ಭೇಟಿ ನೀಡಿದ ನೇತಾಜಿ ನಗರ ಠಾಣೆ ಪೊಲೀಸರು ಪರಿಶೀಲನೆ ನಡೆಸಿ ಮೂವರನ್ನು ವಶಕ್ಕೆ ಪಡೆದಿದ್ದಾರೆ. ಸ್ಮಶಾನದ ಸಿಬ್ಬಂದಿಗೆ ಹಣ ನೀಡಿ ಶವಗಳ ಅವಶೇಷಗಳನ್ನು ಪಡೆಯಲಾಗುತ್ತಿತ್ತು ಎಂಬ ಆರೋಪವೂ ಕೇಳಿಬಂದಿದೆ. 2ನೇ ಪುಟಕ್ಕೆ




## ಅ. 25ರಿಂದ ನ.04 ರವರೆಗೆ ಗಣೇಕಲ್ ಜಲಾಶಯಕ್ಕೆ ನೀರು ತುಂಬಿಸಲು ಕ್ರಮ: ಜಿಲ್ಲಾಧಿಕಾರಿ ಪೂವಿತಾ ಎಸ್.

ರಾಯಚೂರು, ಅ. 25 (ಕರ್ನಾಟಕ ವಾರ್ತೆ): ಜಿಲ್ಲೆಯ ಗಣೇಕಲ್ ಸಮತೋಲನ ಜಲಾಶಯವನ್ನು ತುಂಬಿಸಲು ಅಕ್ಟೋಬರ್ 25ರ ಬೆಳಿಗ್ಗೆ 8 ಗಂಟೆಯಿಂದ ನವೆಂಬರ್ 4ರ ಬೆಳಿಗ್ಗೆ 8 ಗಂಟೆಯವರೆಗೆ ಸರದಿ ಪ್ರಕಾರ ಮೂರು ದಿನಗಳ ಅವಧಿಗೆ ದೊಡ್ಡ ವಿತರಣಾ ಕಾಲುವೆಗಳನ್ನು ಅರ್ಧದಷ್ಟು ಬಂದ್ ಮಾಡಿ, ಉಳಿದ ವಿತರಣಾ ಕಾಲುವೆಗಳನ್ನು ಸಂಪೂರ್ಣ ಬಂದ್ ಮಾಡುವ ಮೂಲಕ ಜಲಾಶಯಕ್ಕೆ ನೀರು ಹರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಪೂವಿತಾ ಎಸ್. ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅಕ್ಟೋಬರ್ 25ರಂದು ಆಯೋಜಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.

ತುಂಗಭದ್ರಾ ಜಲಾಶಯದಲ್ಲಿನ ಪ್ರಸ್ತುತ ನೀರಿನ ಲಭ್ಯತೆಗೆ ಅನುಗುಣವಾಗಿ ತುಂಗಭದ್ರಾ



ಎಡದಂಡೆ ಮುಖ್ಯ ಕಾಲುವೆಯ 108ನೇ ಮೈಲಿಯಲ್ಲಿರುವ ಕೆರೆಗಳನ್ನು ತುಂಬಿಸಲು ಪ್ರತಿ ವಿಭಾಗದಲ್ಲಿ ಸುಮಾರು 200 ಕ್ಯೂಸೆಕ್ ನೀರನ್ನು ಹೆಚ್ಚುವರಿಯಾಗಿ ಹರಿಸಿ ಗಣೇಕಲ್ ಜಲಾಶಯವನ್ನು ತುಂಬಿಸಲಾಗುವುದು. ಗಣೇಕಲ್ ಭಾಗದ ರೈತರಿಗೆ ನೀರಾವರಿಗಾಗಿ ಒಂದು ಸರದಿಯ ನೀರು ಒದಗಿಸಲಾಗುವುದು. ಕುಡಿಯುವ ನೀರಿನ ಎಲ್ಲ ಕೆರೆಗಳನ್ನು ತುಂಬಿಸಿದ ಬಳಿಕ ಸುಮಾರು 15ರಿಂದ 16 ಅಡಿ ನೀರು ಉಳಿಯುವ ನಿರೀಕ್ಷೆಯಿದ್ದು, ಇದು ಮುಂದಿನ ಡಿಸೆಂಬರ್ ತಿಂಗಳಲ್ಲಿ ಕುಡಿಯುವ ನೀರಿನ ಅಗತ್ಯ ಪೂರೈಸಲು ಸಾಕಾಗಲಿದೆ ಎಂದರು.

ಗಣೇಕಲ್ ಜಲಾಶಯ ತುಂಬಿದ ನಂತರ ಸಿಂಧನೂರು, ಮಸ್ಕಿ, ಮಾನ್ವಿ ಹಾಗೂ ಅರಕೇರಾ ಭಾಗದ ಕುಡಿಯುವ ನೀರಿನ ಕೆರೆಗಳನ್ನು ಗರಿಷ್ಠ 13ರಿಂದ 14 ಅಡಿ ಮಟ್ಟದವರೆಗೆ ತುಂಬಿಸಿಕೊಳ್ಳಬೇಕಾಗುತ್ತದೆ. ಕೊನೆಯ ಐದಾರು ದಿನಗಳಲ್ಲಿ ನೀರಾವರಿಗೆ ಹರಿಯುವ ನೀರನ್ನು ಮಧ್ಯಭಾಗದಲ್ಲಿ ಬಳಸುವವರ ನೀರಿನ ಪ್ರಮಾಣವನ್ನು ನಿಯಂತ್ರಿಸುವ ಮೂಲಕ ಸಮರ್ಪಕವಾಗಿ ಹಂಚಿಕೆ ಮಾಡಲಾಗುವುದು ಎಂದು ತಿಳಿಸಿದರು.

ಈ ಹಿಂದೆ ಮೇಲ್ಭಾಗದಿಂದ ಸುಮಾರು 4,200 ಕ್ಯೂಸೆಕ್ಸ್ ನೀರು ಹರಿಸಲಾಗುತ್ತಿದ್ದು, ಇದೀಗ ಅದನ್ನು 3,800 ಕ್ಯೂಸೆಕ್ಸ್‌ಗೆ ಇಳಿಸಲಾಗಿದೆ. ಕುಡಿಯುವ ನೀರಿನ ಕೆರೆಗಳನ್ನೂ ಸಮಾನಾಂತರವಾಗಿ ತುಂಬಿಸುತ್ತಿರುವುದರಿಂದ ನೀರಾವರಿಗೆ ಲಭ್ಯವಾಗುವ 2ನೇ ಪುಟಕ್ಕೆ

## ಉದ್ರಿ ಸಿಗರೇಟ್‌ಗಾಗಿ ಜಗಳ: ಚಾಕು ಇರಿತಕ್ಕೆ ಅಂಗಡಿ ಮಾಲೀಕ ಬಲಿ

ರಾಯಚೂರು: ಸಿಗರೇಟ್ ಉಧಾರಿ ನೀಡಲು ನಿರಾಕರಿಸಿದ ಕಾರಣಕ್ಕೆ ಕಿರಾಣಿ ಅಂಗಡಿ ಮಾಲೀಕನೊಂದಿಗೆ ಜಗಳ ತೆಗೆದ ಯುವಕನೊಬ್ಬ ಚಾಕುವಿನಿಂದ ಇರಿದು ಹತ್ಯೆ ಮಾಡಿರುವ ಘಟನೆ ನಗರದ ಎಲ್‌ಬಿಎಸ್ ನಗರದ ಕ್ರೌನ್ ಬೇಕರಿ ಸಮೀಪ ಶನಿವಾರ ಮಧ್ಯಾಹ್ನ ನಡೆದಿದೆ.

ನಗರದ ಎಲ್‌ಬಿಎಸ್ ಬಡಾವಣೆಯ ನಿವಾಸಿ ನರಸಿಂಹ (40) ಕೊಲೆಯಾದ ದುರ್ದೈವಿ. ಅಂಗಡಿಗೆ ಬಂದ ಯುವಕನೊಬ್ಬ ಸಿಗರೇಟ್ ಉಧಾರಿ ನೀಡುವಂತೆ ಕೇಳಿದ್ದಾನೆ ಎನ್ನಲಾಗಿದ್ದು, ಇದಕ್ಕೆ ಅಂಗಡಿ ಮಾಲೀಕ ನರಸಿಂಹ ನಿರಾಕರಿಸಿದ್ದಾರೆ. ಈ ವಿಚಾರವಾಗಿ ಇಬ್ಬರ ನಡುವೆ ಮಾತಿನ ಚಕಮಕಿ ನಡೆದಿದ್ದು, ಜಗಳ ವಿಕೋಪಕ್ಕೆ ತಿರುಗಿದಾಗ ಯುವಕ ಚಾಕುವಿನಿಂದ ಇರಿದು ಹತ್ಯೆಗೈದಿದ್ದಾನೆ ಎಂದು ತಿಳಿದುಬಂದಿದೆ.

ಸಣ್ಣಪುಟ್ಟ ಉಧಾರಿ ವಿಚಾರಕ್ಕೆ ಆರಂಭವಾದ ವಾಗ್ವಾದ ಕೊಲೆಯಲ್ಲಿ



ಕೊಲೆಯಾದ ವ್ಯಕ್ತಿ

ಅಂತ್ಯಗೊಂಡಿರುವುದು ಬಡಾವಣೆಯ ನಿವಾಸಿಗಳನ್ನು ಬೆಚ್ಚಿಬೀಳಿಸಿದೆ. ಹಾಡಹಗಲೇ ಜನನಿಬಿಡ ಪ್ರದೇಶದಲ್ಲಿ ನಡೆದ ಈ ಕೃತ್ಯ ಸ್ಥಳೀಯರಲ್ಲಿ ಆತಂಕ ಸೃಷ್ಟಿಸಿದ್ದು, ಸಾರ್ವಜನಿಕರ ಸುರಕ್ಷತೆಯ ಬಗ್ಗೆಯೂ ಪ್ರಶ್ನೆಗಳು ಎದ್ದಿವೆ.

ಕೃತ್ಯ ಎಸಗಿದ ಯುವಕನ ಗುರುತು ಇನ್ನೂ ಪತ್ತೆಯಾಗಿಲ್ಲ. ಆರೋಪಿಯು ಗಾಂಜಾ ಅಮಲಿನಲ್ಲಿದ್ದ ಎನ್ನುವ ಮಾತುಗಳು ಸ್ಥಳೀಯರಿಂದ ಕೇಳಿಬಂದಿದ್ದು, ಈ ಕುರಿತು ಪೊಲೀಸರಿಂದ ಯಾವುದೇ ಅಧಿಕೃತ ದೃಢೀಕರಣ ದೊರೆತಿಲ್ಲ. ಕೊಲೆಗೆ ಉಧಾರಿ ವಿಚಾರವೇ ಕಾರಣವೇ ಅಥವಾ ಬೇರೆ ಯಾವುದಾದರೂ ಕಾರಣವಿದೆಯೇ ಎಂಬುದು ತನಿಖೆಯಿಂದ ತಿಳಿದುಬರಬೇಕಿದೆ.

ಘಟನೆಯ ಮಾಹಿತಿ ದೊರೆಯುತ್ತಿದ್ದಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಷು ಗಿರಿ, ಡಿವೈಎಸ್‌ಪಿ ಶಾಂತವೀರ, ಸಿಪಿಐ ಉಮೇಶ ಕಾಂಬ್ಳೆ ಹಾಗೂ ಮಾರ್ಕೆಟ್ ಯಾರ್ಡ್ ಪೊಲೀಸ್ ಠಾಣೆಯ ಸಿಬ್ಬಂದಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಘಟನೆ ನಡೆದ ಸ್ಥಳದಲ್ಲಿ ಮಾಹಿತಿ ಸಂಗ್ರಹಿಸಿದ ಪೊಲೀಸರು ಆರೋಪಿಯ ಪತ್ತೆಗೆ ತನಿಖೆ ಚುರುಕುಗೊಳಿಸಿದ್ದಾರೆ.

ಕ್ಷುಲ್ಲಕ ಕಾರಣಕ್ಕೆ ಅಂಗಡಿ ಮಾಲೀಕನ ಪ್ರಾಣ ತೆಗೆದಿರುವ ಘಟನೆ ನಗರದಲ್ಲಿ ತೀವ್ರ ಆತಂಕಕ್ಕೆ ಕಾರಣವಾಗಿದ್ದು, ಆರೋಪಿಯನ್ನು ಶೀಘ್ರ ಬಂಧಿಸಿ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕೆಂಬ ಆಗ್ರಹ ಸ್ಥಳೀಯರಿಂದ ವ್ಯಕ್ತವಾಗಿದೆ. ಘಟನೆಗೆ ಸಂಬಂಧಿಸಿದಂತೆ ಮಾರ್ಕೆಟ್ ಯಾರ್ಡ್ ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

## ಎರಡು ತಿಂಗಳ ಹಸುಗೂಸಿನ ಹೊಟ್ಟೆಯಲ್ಲಿ ಮತ್ತೊಂದು ಭ್ರೂಣ ಪತ್ತೆ! ವೈದ್ಯಕೀಯ ಲೋಕಕ್ಕೆ ಅಚ್ಚರಿ ಮೂಡಿಸಿದ ಅಪರೂಪದ ಪ್ರಕರಣ

ಸಿಂಧನೂರು: ಕೇವಲ ಎರಡು ತಿಂಗಳ ಗಂಡು ಮಗುವಿನ ಹೊಟ್ಟೆಯೊಳಗೆ ಮತ್ತೊಂದು ಭ್ರೂಣ ಪತ್ತೆಯಾಗಿರುವ ಅಪರೂಪದ ವೈದ್ಯಕೀಯ ಪ್ರಕರಣ ಬೆಳಕಿಗೆ ಬಂದಿದ್ದು, ವೈದ್ಯಕೀಯ ವಲಯದಲ್ಲಿ ತೀವ್ರ ಕುತೂಹಲ ಮೂಡಿಸಿದೆ. ಗದಗ ಜಿಲ್ಲೆಯಿಂದ ಸಿಂಧನೂರಿನ ಸಹನಾ ಆಸ್ಪತ್ರೆಗೆ ಚಿಕಿತ್ಸೆಗೆ ಕರೆತಂದಿದ್ದ ಹಸುಗೂಸಿನಲ್ಲಿ ಈ ಅಸಹಜ ಬೆಳವಣಿಗೆ ಕಂಡುಬಂದಿದ್ದು, ಮಗುವಿನ ಆರೋಗ್ಯ ಸ್ಥಿತಿ ಗಂಭೀರವಾಗಿರುವ ಹಿನ್ನೆಲೆಯಲ್ಲಿ ಹೆಚ್ಚಿನ ಚಿಕಿತ್ಸೆಗಾಗಿ ಬೆಂಗಳೂರಿನ ಆಸ್ಪತ್ರೆಗೆ ರವಾನಿಸಲಾಗಿದೆ.

ಗದಗ ಜಿಲ್ಲೆಯ ದಂಪತಿ ತಮ್ಮ ಎರಡು ತಿಂಗಳ ಗಂಡು ಮಗುವಿಗೆ ಆರೋಗ್ಯ ಸಮಸ್ಯೆ ಕಾಣಿಸಿಕೊಂಡ ಹಿನ್ನೆಲೆಯಲ್ಲಿ ಸಿಂಧನೂರಿನ ಸಹನಾ ಆಸ್ಪತ್ರೆಗೆ ಕರೆತಂದಿದ್ದರು. ಮಗುವನ್ನು ಪರೀಕ್ಷಿಸಿದ ವೈದ್ಯ ಡಾ.ಶಿವರಾಜ ಪಾಟೀಲ್ ಅವರಿಗೆ ಹೊಟ್ಟೆಯೊಳಗೆ ಮತ್ತೊಂದು ಭ್ರೂಣ



ಇರುವ ಅಪರೂಪದ ಸ್ಥಿತಿ ಕಂಡುಬಂದಿದೆ. ಮಗುವಿನ ಆರೋಗ್ಯದ ಸೂಕ್ಷ್ಮತೆಯನ್ನು ಗಮನಿಸಿದ ವೈದ್ಯರು ಪ್ರಾಥಮಿಕ ಚಿಕಿತ್ಸೆ ನೀಡಿ, ಹೆಚ್ಚಿನ ವೈದ್ಯಕೀಯ ಸೌಲಭ್ಯವಿರುವ ಬೆಂಗಳೂರಿನ ಆಸ್ಪತ್ರೆಗೆ ಕಳುಹಿಸಿಕೊಟ್ಟಿದ್ದಾರೆ.

ವೈದ್ಯಕೀಯ ಪರಿಭಾಷೆಯಲ್ಲಿ ಈ ಸ್ಥಿತಿಯನ್ನು 'ಫೀಟಸ್ ಇನ್ ಫೀಟು' (Fetus in Fetu) ಎಂದು ಕರೆಯಲಾಗುತ್ತದೆ. ಗರ್ಭಾವಸ್ಥೆಯ ಆರಂಭಿಕ ಹಂತದಲ್ಲಿ ಅವಳಿ ಭ್ರೂಣಗಳ ಬೆಳವಣಿಗೆಯಲ್ಲಿನ ಅಸಹಜತೆಯಿಂದ ಒಂದು ಭ್ರೂಣ ಮತ್ತೊಂದು ಭ್ರೂಣದ ದೇಹದೊಳಗೆ ಬೆಳವಣಿಗೆಯಾಗುವ ಅತ್ಯಂತ ಅಪರೂಪದ ಸ್ಥಿತಿ ಇದಾಗಿದೆ. ಸಾಮಾನ್ಯವಾಗಿ ಇಂತಹ ಪ್ರಕರಣಗಳು ವೈದ್ಯಕೀಯ ಕ್ಷೇತ್ರದಲ್ಲಿ ವಿರಳವಾಗಿ ಕಂಡುಬರುತ್ತವೆ.

ಸುಮಾರು 50 ಲಕ್ಷ ಮಕ್ಕಳಲ್ಲಿ ಒಂದು ಅಥವಾ ಎರಡು ಪ್ರಕರಣಗಳು ಮಾತ್ರ ಕಂಡುಬರುವ ಸಾಧ್ಯತೆ ಇದೆ ಎಂದು ಹೇಳಲಾಗುತ್ತಿರುವ ಈ ಸ್ಥಿತಿ, ವೈದ್ಯರಿಗೂ ಚಿಕಿತ್ಸೆಯ ದೃಷ್ಟಿಯಿಂದ ದೊಡ್ಡ ಸವಾಲಾಗಿ ಪರಿಣಮಿಸಿದೆ. ಅದರಲ್ಲೂ ಎರಡು ತಿಂಗಳ ಹಸುಗೂಸಿನಲ್ಲಿ ಇಂತಹ ಅಸಹಜ ಬೆಳವಣಿಗೆ ಪತ್ತೆಯಾಗಿರುವುದು ಆತಂಕಕ್ಕೆ ಕಾರಣವಾಗಿದೆ.

ಮಗುವಿನ 2ನೇ ಪುಟಕ್ಕೆ

## ಕಿರಾಣಿ ಅಂಗಡಿ ಮಾಲೀಕನ ಕೊಲೆ ಖಂಡಿಸಿ ಎಸ್‌ಪಿ ಕಚೇರಿಗೆ ಆರ್ಯವೈಶ್ಯ ಸಮಾಜದ ಮುತ್ತಿಗೆ: ಆರೋಪಿಗಳ ಬಂಧನಕ್ಕೆ 24 ಗಂಟೆಗಳ ಗಡುವು

ರಾಯಚೂರು: ನಗರದ ಎಲ್‌ಬಿಎಸ್ ನಗರದಲ್ಲಿ ಸಿಗರೇಟ್ ಉಧಾರ ನೀಡಲು ನಿರಾಕರಿಸಿದ ಕಾರಣಕ್ಕೆ ಕಿರಾಣಿ ಅಂಗಡಿ ಮಾಲೀಕ ಬಾಪೂರು ನರಸಿಂಹ ಅವರನ್ನು ಬರ್ಬರವಾಗಿ ಹತ್ಯೆ ಮಾಡಲಾಗಿದೆ ಎನ್ನಲಾದ ಘಟನೆಯನ್ನು ಖಂಡಿಸಿ ಆರ್ಯವೈಶ್ಯ ಸಮಾಜದ ಮುಖಂಡರು ಹಾಗೂ ಸದಸ್ಯರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಚೇರಿ ಎದುರು ಜಮಾಯಿಸಿ ಆರೋಪಿಗಳನ್ನು ಕೂಡಲೇ ಬಂಧಿಸುವಂತೆ ಆಗ್ರಹಿಸಿದರು.

ನರಸಿಂಹ ಅವರ ಕೊಲೆ ಪ್ರಕರಣದ ಮಾಹಿತಿ ತಿಳಿಯುತ್ತಿದ್ದಂತೆ ಆರ್ಯವೈಶ್ಯ ಸಮಾಜದ ಮುಖಂಡರು ತೀವ್ರ ಆಕ್ರೋಶ ವ್ಯಕ್ತಪಡಿಸಿದರು. ಘಟನೆಯನ್ನು ಖಂಡಿಸಿ ಪೊಲೀಸ್ ಇಲಾಖೆಗೆ ಮನವಿ ಸಲ್ಲಿಸಲು ವಾಟ್ಸಾಪ್ ಮೂಲಕ ಸಮಾಜದ ಸದಸ್ಯರಿಗೆ ಮಾಹಿತಿ ರವಾನಿಸಿ, ಸಂಜೆ 5 ಗಂಟೆಗೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಚೇರಿ ಬಳಿ ಸೇರುವಂತೆ ಕರೆ ನೀಡಲಾಗಿತ್ತು.



ಈ ಕರೆಗೆ ಸ್ಪಂದಿಸಿದ ನಗರದ ವಿವಿಧ ಬಡಾವಣೆಗಳ ಸುಮಾರು 400ರಿಂದ 500 ಮಂದಿ ಆರ್ಯವೈಶ್ಯ ಸಮಾಜದ ಸದಸ್ಯರು ಪೊಲೀಸ್ ವರಿಷ್ಠಾಧಿಕಾರಿ ಕಚೇರಿ ಬಳಿ ಜಮಾಯಿಸಿ, ಕೊಲೆ ಘಟನೆಯನ್ನು ತೀವ್ರವಾಗಿ ಖಂಡಿಸಿದರು. ಕ್ಷುಲ್ಲಕ 2ನೇ ಪುಟಕ್ಕೆ

## 41ನೇ ರಾಜ್ಯಮಟ್ಟದ ಪತ್ರಕರ್ತರ ಸಮ್ಮೇಳನ ಯಶಸ್ಸಿಗೆ ಎಲ್ಲರೂ ಒಗ್ಗಟ್ಟಿನಿಂದ ಶ್ರಮಿಸಿ: ಆರ್. ಗುರುನಾಥ

ಲಿಂಗಸುಗೂರು, ಅ.24: ರಾಯಚೂರಿನಲ್ಲಿ ನಡೆಯಲಿರುವ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ 41ನೇ ರಾಜ್ಯಮಟ್ಟದ ಪತ್ರಕರ್ತರ ಸಮ್ಮೇಳನವನ್ನು ಯಶಸ್ವಿಗೊಳಿಸಲು ಜಿಲ್ಲೆಯ ಎಲ್ಲ ಪತ್ರಕರ್ತರು ಭಿನ್ನಾಭಿಪ್ರಾಯಗಳನ್ನು ಮರೆತು ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಬೇಕು ಎಂದು ಸಂಘದ ರಾಯಚೂರು ಜಿಲ್ಲಾಧ್ಯಕ್ಷ ಆರ್. ಗುರುನಾಥ ಕರೆ ನೀಡಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಸಮ್ಮೇಳನದ ಪೂರ್ವಸಿದ್ಧತೆ ಕುರಿತು ಜಿಲ್ಲಾ ಸಮಿತಿ ಹಾಗೂ ಲಿಂಗಸುಗೂರು ತಾಲೂಕು ಸಮಿತಿಯ ಸಹಯೋಗದಲ್ಲಿ ಆಯೋಜಿಸಿದ್ದ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿದರು.

ರಾಜ್ಯಮಟ್ಟದ ಪತ್ರಕರ್ತರ ಸಮ್ಮೇಳನವನ್ನು ಆಯೋಜಿಸುವ ಅವಕಾಶ ರಾಯಚೂರು ಜಿಲ್ಲೆಗೆ ದೊರೆತಿರುವುದು ಹೆಮ್ಮೆಯ ಸಂಗತಿಯಾಗಿದೆ. ಇಂತಹ ಮಹತ್ವದ ಕಾರ್ಯಕ್ರಮವನ್ನು ಯಶಸ್ವಿಯಾಗಿ




ನಡೆಸುವುದು ಜಿಲ್ಲೆಯ ಪ್ರತಿಯೊಬ್ಬ ಪತ್ರಕರ್ತರ ಜವಾಬ್ದಾರಿಯಾಗಿದೆ. ಸಮ್ಮೇಳನವು ಜಿಲ್ಲೆಯ ಗೌರವ ಹೆಚ್ಚಿಸುವ ರೀತಿಯಲ್ಲಿ ನಡೆಯಬೇಕಾದರೆ ಎಲ್ಲರ ಸಹಕಾರ ಮತ್ತು ಸಂಘಟಿತ ಪ್ರಯತ್ನ ಅಗತ್ಯವಾಗಿದೆ ಎಂದು ಹೇಳಿದರು.

ಸಮ್ಮೇಳನವನ್ನು ಕೇವಲ ಸಂಘದ ಕಾರ್ಯಕ್ರಮವೆಂದು ಪರಿಗಣಿಸದೆ ಪ್ರತಿಯೊಬ್ಬ ಸದಸ್ಯರೂ ತಮ್ಮ ಮನೆಯ ಸಮಾರಂಭವೆಂಬ ಭಾವನೆಯೊಂದಿಗೆ ಜವಾಬ್ದಾರಿ ವಹಿಸಿಕೊಳ್ಳಬೇಕು. ಕಾರ್ಯಕ್ರಮದ ಸಿದ್ಧತೆ, ಸಂಘಟನಾ ಚಟುವಟಿಕೆಗಳು ಹಾಗೂ ವಿವಿಧ ವ್ಯವಸ್ಥೆಗಳ ನಿರ್ವಹಣೆಯಲ್ಲಿ ಎಲ್ಲರೂ ಸಕ್ರಿಯವಾಗಿ ತೊಡಗಿಸಿಕೊಳ್ಳಬೇಕು. ಸಮ್ಮೇಳನವನ್ನು ಹಬ್ಬದ ವಾತಾವರಣದಲ್ಲಿ ಅಚ್ಚುಕಟ್ಟಾಗಿ ಆಯೋಜಿಸಲು ಶ್ರಮಿಸಬೇಕು ಎಂದು ತಿಳಿಸಿದರು.

ವಿಶೇಷವಾಗಿ ಸಮ್ಮೇಳನಕ್ಕೆ ಅಗತ್ಯವಿರುವ ಆರ್ಥಿಕ ಸಂಪನ್ಮೂಲ ಕ್ರೋಢೀಕರಣ ಪ್ರಮುಖ ಜವಾಬ್ದಾರಿಯಾಗಿದೆ. ಸಂಘದ ಸದಸ್ಯರು ದಾನಿಗಳು ಹಾಗೂ ಸಹಕಾರ ನೀಡುವವರನ್ನು ಭೇಟಿ ಮಾಡಿ ಅಗತ್ಯ 2ನೇ ಪುಟಕ್ಕೆ

## ಕಲ್ಯಾಣ ಕರ್ನಾಟಕದ ಅಭಿವೃದ್ಧಿ ಹಾಗೂ 371(ಜೆ) ಪರಿಣಾಮಕಾರಿ ಜಾರಿಗೆ ಒತ್ತಾಯಿಸಿ ಸೈಕಲ್ ಜಾಗೃತಿ ಯಾತ್ರೆ




ಲಿಂಗಸುಗೂರು: ಕಲ್ಯಾಣ ಕರ್ನಾಟಕ ಭಾಗದ ಸಮಗ್ರ ಅಭಿವೃದ್ಧಿ ಹಾಗೂ ಸಂವಿಧಾನದ 371(ಜೆ) ಕಲಂನಡಿ ದೊರೆಯುವ ಸೌಲಭ್ಯಗಳನ್ನು ಅರ್ಹ ಫಲಾನುಭವಿಗಳಿಗೆ ಸಮರ್ಪಕವಾಗಿ ತಲುಪಿಸುವ ಉದ್ದೇಶದಿಂದ ಕಲಬುರಗಿಯಿಂದ ಬಳ್ಳಾರಿವರೆಗೆ ಸೈಕಲ್ ಜಾಗೃತಿ ಯಾತ್ರೆ ಹಮ್ಮಿಕೊಳ್ಳಲಾಗಿದೆ ಎಂದು ಕಲ್ಯಾಣ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಹಾಗೂ ಸಂಪಾದಕ ಮಲ್ಲಿಕಾರ್ಜುನ ಎಂ. ಪಗಡೆ ತಿಳಿಸಿದರು.

ಪಟ್ಟಣದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಕ್ಟೋಬರ್ 20ರಂದು ಬೆಳಿಗ್ಗೆ 8 ಗಂಟೆಗೆ ಕಲಬುರಗಿ ನಗರದ ಜಗತ್ ವೃತ್ತದಲ್ಲಿರುವ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಪ್ರತಿಮೆ ಬಳಿಯಿಂದ ಜಾಗೃತಿ ಯಾತ್ರೆಗೆ ಚಾಲನೆ ನೀಡಲಾಗಿದೆ ಎಂದು ಹೇಳಿದರು.

ಕಲ್ಯಾಣ ಕರ್ನಾಟಕ ಭಾಗದ ಜನರು ಎದುರಿಸುತ್ತಿರುವ ವಿವಿಧ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತರುವುದರ ಜೊತೆಗೆ ಸಂವಿಧಾನದ 371(ಜೆ) ಕಲಂನಡಿ ದೊರೆಯುವ ವಿಶೇಷ ಸೌಲಭ್ಯಗಳ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು ಯಾತ್ರೆಯ ಪ್ರಮುಖ ಉದ್ದೇಶವಾಗಿದೆ. ಈ ಭಾಗದ ಶಿಕ್ಷಣ, ಉದ್ಯೋಗ ಹಾಗೂ ಅಭಿವೃದ್ಧಿಗೆ ಸಂಬಂಧಿಸಿದ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಂಡುಕೊಳ್ಳುವ ಅಗತ್ಯವಿದೆ ಎಂದು ತಿಳಿಸಿದರು.

ಕಲ್ಯಾಣ ಕರ್ನಾಟಕದ ಅಭಿವೃದ್ಧಿಗಾಗಿ ಸಂವಿಧಾನದ 371(ಜೆ) ಕಲಂ ಜಾರಿಗೆ ಬಂದಿದ್ದರೂ ಅದರ ಪ್ರಯೋಜನಗಳು ಅರ್ಹರಿಗೆ ಸಮರ್ಪಕವಾಗಿ ತಲುಪುವಂತೆ ನೋಡಿಕೊಳ್ಳಬೇಕಾಗಿದೆ. ವಿಶೇಷವಾಗಿ ಯುವಜನತೆಗೆ ಶಿಕ್ಷಣ ಮತ್ತು ಉದ್ಯೋಗದಲ್ಲಿ ದೊರೆಯುವ ಅವಕಾಶಗಳ ಕುರಿತು ಹೆಚ್ಚಿನ ಜಾಗೃತಿ ಮೂಡಿಸುವುದು ಅಗತ್ಯವಾಗಿದೆ. ಸರ್ಕಾರದ ಯೋಜನೆಗಳು ಹಾಗೂ ಸಂವಿಧಾನಾತ್ಮಕ ಸೌಲಭ್ಯಗಳ ಬಗ್ಗೆ ಮಾಹಿತಿ ಕೊರತೆಯಿಂದ ಅರ್ಹರು 2ನೇ ಪುಟಕ್ಕೆ

## ಪತ್ರಿಕಾ ಭವನದ ಸಭಾಭವನ ನಿರ್ಮಾಣ ಕಾಮಗಾರಿಗೆ ಆರ್. ಗುರುನಾಥ ಮೆಚ್ಚುಗೆ

ಲಿಂಗಸುಗೂರು: ಪತ್ರಕರ್ತರ ವೃತ್ತಿಪರ ಚಟುವಟಿಕೆಗಳಿಗೆ ಅನುಕೂಲವಾಗುವಂತೆ ಪಟ್ಟಣದ ಪತ್ರಿಕಾ ಭವನದ ಮೇಲ್ಮಹಡಿಯಲ್ಲಿ ನಿರ್ಮಿಸಲಾಗುತ್ತಿರುವ ನೂತನ ಸಭಾಭವನದ ಅಭಿವೃದ್ಧಿ ಕಾಮಗಾರಿಗೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಯಚೂರು ಜಿಲ್ಲಾಧ್ಯಕ್ಷ ಆರ್. ಗುರುನಾಥ ಮೆಚ್ಚುಗೆ ವ್ಯಕ್ತಪಡಿಸಿದರು.

ಪಟ್ಟಣದ ಪತ್ರಿಕಾ ಭವನಕ್ಕೆ ಭೇಟಿ ನೀಡಿ ನಿರ್ಮಾಣ ಹಂತದಲ್ಲಿರುವ ಸಭಾಭವನದ ಕಾಮಗಾರಿಯನ್ನು ವೀಕ್ಷಿಸಿದ ಅವರು, ಕಟ್ಟಡದ ಪ್ರಗತಿ ಹಾಗೂ ಪತ್ರಕರ್ತರಿಗೆ ಕಲ್ಪಿಸಲಾಗುತ್ತಿರುವ ಸೌಲಭ್ಯಗಳ ಕುರಿತು ಸ್ಥಳೀಯ ಸಂಘದ ಪದಾಧಿಕಾರಿಗಳೊಂದಿಗೆ ಚರ್ಚಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಪತ್ರಕರ್ತರ ಸಂಘಟನೆಗಳು ಬಲಿಷ್ಠವಾಗಲು ಅಗತ್ಯ ಮೂಲಸೌಕರ್ಯಗಳಿರುವುದು ಮುಖ್ಯವಾಗಿದೆ. ಪತ್ರಿಕಾ ಭವನಗಳು ಕೇವಲ ಸಭೆಗಳನ್ನು ನಡೆಸುವ ಸ್ಥಳಗಳಾಗದೆ



ಪತ್ರಕರ್ತರ ವೃತ್ತಿಪರ ಚಟುವಟಿಕೆಗಳು, ವಿಚಾರ ವಿನಿಮಯ, ತರಬೇತಿ ಕಾರ್ಯಕ್ರಮಗಳು ಹಾಗೂ ಸಂಘಟನಾತ್ಮಕ ಚಟುವಟಿಕೆಗಳಿಗೆ ಪೂರಕವಾದ ಕೇಂದ್ರಗಳಾಗಬೇಕು ಎಂದು ಅಭಿಪ್ರಾಯಪಟ್ಟರು.

ಲಿಂಗಸುಗೂರು ಪತ್ರಿಕಾ ಭವನದ ಮೇಲ್ಮಹಡಿಯಲ್ಲಿ ಸಭಾಭವನ ನಿರ್ಮಾಣಕ್ಕೆ ಮುಂದಾಗಿರುವುದು ಉತ್ತಮ ಬೆಳವಣಿಗೆಯಾಗಿದೆ. ಈ ಸೌಲಭ್ಯದಿಂದ ತಾಲೂಕು ಹಾಗೂ ಜಿಲ್ಲೆಯ ಪತ್ರಕರ್ತರಿಗೆ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲು ಅನುಕೂಲವಾಗಲಿದೆ. ಪತ್ರಕರ್ತರ ಸಂಘಟನಾ ಚಟುವಟಿಕೆಗಳನ್ನು ಮತ್ತಷ್ಟು ಪರಿಣಾಮಕಾರಿಯಾಗಿ 2ನೇ ಪುಟಕ್ಕೆ

# ಶರನ್ನವರಾತ್ರಿ ಅಂಗವಾಗಿ ಮಾರನಬಸರಿಯಲ್ಲಿ ಶ್ರೀ ದೇವಿಮಹಾತ್ಮೆ ಪಾರಾಯಣ-ವ್ಯಾಖ್ಯಾನ ಪ್ರವಚನ ಸಂಪನ್ನ



**ಗಜೇಂದ್ರಗಡ.ಅ.24** ಶರನ್ನವರಾತ್ರಿಯ ಶುಭ ಸಂದರ್ಭದಲ್ಲಿ ವೀರೇಶ್ವರ ಪುಣ್ಯಾಶ್ರಮ, ಗದಗ ಇವರ ವತಿಯಿಂದ ಗಜೇಂದ್ರಗಡ ತಾಲ್ಲೂಕಿನ ಮಾರನಬಸರಿ ಗ್ರಾಮದ ಕಾಳಿಕಾದೇವಿ ದೇವಸ್ಥಾನದಲ್ಲಿ ಶ್ರೀ ದೇವಿಮಹಾತ್ಮೆಯ ಪಾರಾಯಣ ಮತ್ತು ವ್ಯಾಖ್ಯಾನ ಪ್ರವಚನ ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು. ನವರಾತ್ರಿಯ ಪವಿತ್ರ ದಿನಗಳಲ್ಲಿ ನಡೆದ ಈ ಧಾರ್ಮಿಕ ಕಾರ್ಯಕ್ರಮದಲ್ಲಿ ಸುತ್ತಮುತ್ತಲಿನ ಗ್ರಾಮಗಳಿಂದ ನೂರಾರು ಭಕ್ತರು ಭಾಗವಹಿಸಿ ದೈವಿಕ ವಾತಾವರಣದಲ್ಲಿ ಪಾರಾಯಣ ಮತ್ತು ಪ್ರವಚನವನ್ನು ಆಲಿಸಿದರು.

ವ್ಯಾಖ್ಯಾನಕಾರರು ಮತ್ತು ಪಾರಾಯಣಕಾರರು

ಪ್ರವಚನದ ವ್ಯಾಖ್ಯಾನವನ್ನು ಖ್ಯಾತ ಗಾಯಕರಾದ ಶ್ರೀ ಪಂಡಿತ ಪುಟ್ಟರಾಜ ಗವಾಯಿಗಳವರ ಶಿಷ್ಯರಾದ ಶ್ರೀ ಲಕ್ಷ್ಮಣ ಶಾಸ್ತ್ರಿಗಳು (ವೀರೇಶ್ವರ ಪುಣ್ಯಾಶ್ರಮ, ಗದಗ) ಮಾಡಿದರು. ಶ್ರೀ ದೇವಿಮಹಾತ್ಮೆಯ ಪಾರಾಯಣವನ್ನು ಶ್ರೀ ಜಗದೀಶ ಹೆಬ್ಬಾಳ (ಸಾ/ ಉಟಕನೂರು, ವೀರೇಶ್ವರ ಪುಣ್ಯಾಶ್ರಮ, ಗದಗ) ಅವರು ನಡೆಸಿಕೊಟ್ಟರು. ಕಾರ್ಯಕ್ರಮಕ್ಕೆ ವೇದಮೂರ್ತಿ ಶ್ರೀ ಮಹಾಂತೇಶ ಮಠಪತಿ (ಸಾ/ ಮುತ್ತಂಗಿ, ವೀರೇಶ್ವರ ಪುಣ್ಯಾಶ್ರಮ, ಗದಗ) ಅವರು ತಬಲಾ ವಾದನದ ಮೂಲಕ ಸಾಥ್ ನೀಡಿ ಕಾರ್ಯಕ್ರಮಕ್ಕೆ ಸಂಗೀತಮಯ ಸೊಬಗು ನೀಡಿದರು.

ದೇವಿಮಹಾತ್ಮೆಯ ಮಹತ್ವದ ವಿವರಣೆ

ಪ್ರವಚನದಲ್ಲಿ ಶ್ರೀ ಲಕ್ಷ್ಮಣ ಶಾಸ್ತ್ರಿಗಳು ಶ್ರೀ ದೇವಿಮಹಾತ್ಮೆಯಲ್ಲಿನ ದುರ್ಗಾಸಪ್ತಶತಿಯ ವಿಷಯಗಳನ್ನು ಸರಳ ಹಾಗೂ ಸುಂದರ ಭಾಷೆಯಲ್ಲಿ ಭಕ್ತರಿಗೆ ವಿವರಿಸಿದರು. ನವರಾತ್ರಿಯ ಒಂಬತ್ತು ದಿನಗಳಲ್ಲಿ ದೇವಿಯ ಒಂಬತ್ತು ರೂಪಗಳನ್ನು ಆರಾಧಿಸುವ ಸಂಪ್ರದಾಯದ ಮಹತ್ವವನ್ನು ಅವರು ವಿವರಿಸುತ್ತಾ, ದೇವಿಮಹಾತ್ಮೆಯ ಪಾರಾಯಣದಿಂದ ಮನಸ್ಸಿಗೆ ಶಾಂತಿ ದೊರೆಯುತ್ತದೆ, ಪಾಪಗಳು ಪರಿಹಾರವಾಗುತ್ತವೆ ಮತ್ತು ಭಕ್ತಿಯ ಮಾರ್ಗ ಸುಗಮ ವಾಗುತ್ತದೆ ಎಂದು ತಿಳಿಸಿದರು.

ದುಷ್ಟಶಕ್ತಿಗಳನ್ನು ಸಂಹರಿಸಿ ಧರ್ಮವನ್ನು ರಕ್ಷಿಸಿದ ದೇವಿಯ ಕಥೆಗಳು

ಭಕ್ತರಲ್ಲಿ ಧೈರ್ಯ ಮತ್ತು ಸಕಾರಾತ್ಮಕ ಚಿಂತನೆಯನ್ನು ತುಂಬುತ್ತವೆ ಎಂದು ಅವರು ಹೇಳಿದರು. ನವರಾತ್ರಿಯಂತಹ ಪವಿತ್ರ ದಿನಗಳಲ್ಲಿ ದೇವಿಮಹಾತ್ಮೆಯ ಪಾರಾಯಣ ಮಾಡುವುದರಿಂದ ವಿಶೇಷ ಫಲ ದೊರೆಯುತ್ತದೆ ಎಂದು ಶಾಸ್ತ್ರಿಗಳು ಭಕ್ತರಿಗೆ ಮಾರ್ಗದರ್ಶನ ನೀಡಿದರು. ಪಾರಾಯಣ ಮತ್ತು ಪ್ರವಚನದ ವೇಳೆ ದೇವಸ್ಥಾನದ ಆವರಣ ಭಕ್ತಿಮಯ ವಾತಾವರಣದಿಂದ ತುಂಬಿತ್ತು. ಮಹಿಳೆಯರು, ಹಿರಿಯರು ಮತ್ತು ಯುವಕರು ಸೇರಿದಂತೆ ಮಾರನಬಸರಿ ಹಾಗೂ ಸುತ್ತಮುತ್ತಲಿನ ಗ್ರಾಮಗಳಿಂದ ಆಗಮಿಸಿದ ನೂರಾರು ಭಕ್ತರು ಪ್ರವಚನ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಕಾರ್ಯಕ್ರಮದ ನಂತರ ಭಕ್ತರಿಗೆ ಪ್ರಸಾದ ವಿತರಣೆ ಮಾಡಲಾಯಿತು. ಕಾರ್ಯಕ್ರಮವನ್ನು ಯಶಸ್ವಿಯಾಗಿ ಸಂಘಟಿಸಿದ ವೀರೇಶ್ವರ ಪುಣ್ಯಾಶ್ರಮ, ಗದಗ ಮತ್ತು ಕಾಳಿಕಾದೇವಿ ದೇವಸ್ಥಾನ ಸಮಿತಿಯವರಿಗೆ ಭಕ್ತರು ಕೃತಜ್ಞತೆ ಸಲ್ಲಿಸಿದರು.

# ಯಕ್ಲಾಸ್ಪುರದಲ್ಲಿ ವಿಜೃಂಭಣೆಯಿಂದ ಜರುಗಿದ ಶ್ರೀ ಅಂಬಾದೇವಿ ಪುರಾಣ ಪ್ರವಚನ ಶರನ್ನವರಾತ್ರಿ ಅಂಗವಾಗಿ ಮೆರವಣಿಗೆ, ಪುರವಂತಿಕೆ ಕಾರ್ಯಕ್ರಮಕ್ಕೆ ಭಕ್ತಸಾಗರ



**ಕವಿತಾಳ ಅ. 23.** ರಾಯಚೂರು ಜಿಲ್ಲೆಯ ಮಸ್ಕಿ ತಾಲೂಕಿನ ಯಕ್ಲಾಸ್ಪುರ ಗ್ರಾಮದಲ್ಲಿ ಶರನ್ನವರಾತ್ರಿ ಅಂಗವಾಗಿ ಪರಮಪೂಜ್ಯ ಶ್ರೀ ಗುರುಪಾದಯ್ಯ ತಾತನವರ ಮಠದಲ್ಲಿ ಆಯೋಜಿಸಿದ್ದ 6 ನೇ ವರ್ಷದ ಶ್ರೀ ಅಂಬಾದೇವಿ ಪುರಾಣ ಪ್ರವಚನ ಕಾರ್ಯಕ್ರಮ ಭಕ್ತಿಭಾವದಿಂದ ವಿಜೃಂಭಣೆಯಿಂದ ಜರುಗಿತು.

ಅಕ್ಟೋಬರ್ 11ರಿಂದ 21ರವರೆಗೆ ನಡೆದ ಪುರಾಣ ಪ್ರವಚನ ಕಾರ್ಯಕ್ರಮವು ಮಾತೋಶ್ರೀ ನಂದಿಕೇಶ್ವರಿ ಅಮ್ಮನವರು, ಮಲ್ಲಯ್ಯ ಸ್ವಾಮಿ ಹಿರೇಮಠ, ಅಮರಯ್ಯ ಸ್ವಾಮಿ ಹಿರೇಮಠ ಹಾಗೂ ಸೋಮಣ್ಣ ತಾತ ಮಲ್ಲಯ್ಯ ಸ್ವಾಮಿ ಹಿರೇಮಠ ಅವರ ಆಶೀರ್ವಾದದೊಂದಿಗೆ ನೆರವೇರಿತು.

ಕಾರ್ಯಕ್ರಮದ ಅಂಗವಾಗಿ ಅ.21. ರಂದು ಬುಧವಾರ ಮಹಿಳೆಯರ ಕುಂಭ, ಕಳಸದೊಂದಿಗೆ ಶ್ರೀ ಅಂಬಾದೇವಿಯ ಭವ್ಯ ಮೆರವಣಿಗೆ ಹಾಗೂ ಪುರವಂತಿಕೆ ಸೇವೆ ಸಡಗರ ಸಂಭ್ರಮದಿಂದ ನಡೆಯಿತು.

ಗ್ರಾಮದ ಪ್ರಮುಖ ಬೀದಿಗಳಲ್ಲಿ ನಡೆದ ಮೆರವಣಿಗೆಯಲ್ಲಿ ದೇವಿಯ ಭಕ್ತರು ಭಕ್ತಿಯಿಂದ ಪಾಲ್ಗೊಂಡು ಧಾರ್ಮಿಕ ಆಚರಣೆಗಳಿಗೆ ಮೆರುಗು ತಂದರು. ಸುತ್ತಮುತ್ತಲಿನ ಗ್ರಾಮಗಳ ಭಕ್ತಾದಿಗಳು ಸಹ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ದೇವಿಯ ದರ್ಶನ ಪಡೆದು ಪೂಜೆ ಸಲ್ಲಿಸಿದರು.

ಶರನ್ನವರಾತ್ರಿ ಸಂದರ್ಭದಲ್ಲಿ ನಡೆಯುವ ಇಂತಹ ಧಾರ್ಮಿಕ ಕಾರ್ಯಕ್ರಮಗಳು ಗ್ರಾಮೀಣ ಭಾಗದ ಜನರಲ್ಲಿ ಭಕ್ತಿ, ಧಾರ್ಮಿಕ ಶ್ರದ್ಧೆ ಹಾಗೂ ಸಾಂಸ್ಕೃತಿಕ ಪರಂಪರೆಯನ್ನು ಉಳಿಸಿ ಬೆಳೆಸಲು ಸಹಕಾರಿಯಾಗಿವೆ. ಗ್ರಾಮದ ಭಕ್ತರು ಮತ್ತು ಸುತ್ತಮುತ್ತಲಿನ ಪ್ರದೇಶದ ಜನರ ಸಹಭಾಗಿತ್ವದಲ್ಲಿ ಕಾರ್ಯಕ್ರಮವು ಉತ್ಸಾಹಭರಿತ ವಾತಾವರಣದಲ್ಲಿ ನೆರವೇರಿತು.

6 ನೇ ವರ್ಷದ ಶ್ರೀ ಅಂಬಾದೇವಿ ಪುರಾಣ ಪ್ರವಚನ ಕಾರ್ಯಕ್ರಮವು ಭಕ್ತರ ಸಮ್ಮುಖದಲ್ಲಿ ಯಶಸ್ವಿಯಾಗಿ ಜರುಗಿತು.

ಹಾಗೂ ಗ್ರಾಮದ ದೇವತೆ ಕಾಳಿಕಾ ದೇವಿ ಸನ್ನಿಧಿಯಲ್ಲಿ ವಿಶೇಷ ಪೂಜೆ ಸಲ್ಲಿಸಿ ಅನ್ನಪ್ರಸಾದ ಕಾರ್ಯಕ್ರಮ ನೆರವೇರಿಸಲಾಯಿತು.

# ಸಾಮೂಹಿಕ ಅತ್ಯಾಚಾರ ಪ್ರಕರಣ: ಆರೋಪಿಗಳ ಜಾಮೀನು ಅರ್ಜಿ ವಜಾ

**ಯಾದಗಿರಿ.ಅ.24:** ಮಹಿಳೆಯ ಮೇಲಿನ ಸಾಮೂಹಿಕ ಅತ್ಯಾಚಾರ ಹಾಗೂ ಜೀವ ಬೆದರಿಕೆ ಆರೋಪಗಳಿಗೆ ಸಂಬಂಧಿಸಿದ ಪ್ರಕರಣದಲ್ಲಿ ಆರೋಪಿಗಳು ಸಲ್ಲಿಸಿದ್ದ ಜಾಮೀನು ಅರ್ಜಿಯನ್ನು ಯಾದಗಿರಿಯ 1ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ತಿರಸ್ಕರಿಸಿದೆ.

ಯಾದಗಿರಿ ಮಹಿಳಾ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದ್ದು, ಒಟ್ಟು ಆರು ಮಂದಿ ಆರೋಪಿಗಳ ವಿರುದ್ಧ ಆರೋಪಗಳಿವೆ. ಜೂನ್ 1 ರಂದು ಬೆಳಗಿನ ಜಾವ 1ರಿಂದ 3 ಗಂಟೆಯ ಅವಧಿಯಲ್ಲಿ ಸಂತ್ರಸ್ತ ಮಹಿಳೆಯನ್ನು ಯಾದಗಿರಿ ರೈಲ್ವೆ ನಿಲ್ದಾಣದ ಸಮೀಪದ ಮನೆಗೆ ಕರೆದೊಯ್ದು ಸಾಮೂಹಿಕ ಅತ್ಯಾಚಾರ ಎಸಗಿದ್ದಾರೆ ಎಂದು ದೂರಿನಲ್ಲಿ ಆರೋಪಿಸಲಾಗಿದೆ. ಬಳಿಕ ಜೂನ್ 2ರಿಂದ ವಿವಿಧ ದಿನಾಂಕಗಳಲ್ಲಿ ಬೇರೆ ಬೇರೆ ಲಾಡ್ಜ್‌ಗಳು ಹಾಗೂ ಅರಣ್ಯ ಪ್ರದೇಶಗಳಿಗೆ ಕರೆದೊಯ್ದು ಅತ್ಯಾಚಾರ ಎಸಗಿದ್ದಲ್ಲದೆ, ಜೀವ ಬೆದರಿಕೆ ಹಾಕಿದ್ದಾರೆ ಎಂಬ ಆರೋಪವೂ ಪ್ರಕರಣದಲ್ಲಿದೆ.

ಮೂವರು ಆರೋಪಿಗಳ ಬಂಧನ:

ಪ್ರಕರಣಕ್ಕೆ ಸಂಬಂಧಿಸಿದಂತೆ ಮಲ್ಲು ಅಲಿಯಾಸ್ ಮಲ್ಲಪ್ಪ ಶರಣಪ್ಪ ಹೊಸಮನಿ, ಮಲ್ಲಿಂಗೌಡ ಧರ್ಮರಾಯ ಹಾಗೂ ಮಹೇಶ ಹಣಮಂತರಾಯ ಕಾಳೂರು ಅವರನ್ನು ಬಂಧಿಸಲಾಗಿದೆ ಎಂದು ನೀಡಿರುವ ಮಾಹಿತಿಯಲ್ಲಿ ತಿಳಿಸಲಾಗಿದೆ. ಶರಣಪ್ಪ ನಾಗಪ್ಪ ಪೂಜಾರಿ, ಆಕಾಶ ಅಲಿಯಾಸ್ ಪಪ್ಪು ಮಹಾದೇವ ಹಾಗೂ ಹರ್ಷ ಅಲಿಯಾಸ್ ಸುಧಾಕರ ಅಮೃತ ಎಂಬ ಇತರ ಮೂವರು ಆರೋಪಿಗಳು ತಲೆಮರೆಸಿಕೊಂಡಿದ್ದಾರೆ ಎಂದು ತಿಳಿಸಲಾಗಿದೆ.

ಆರೋಪಿಗಳು ಸಲ್ಲಿಸಿದ್ದ ಜಾಮೀನು ಅರ್ಜಿಯ ವಿಚಾರಣೆ ನಡೆಸಿದ 1ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಎ. ಈರಣ್ಣ ಅವರು ಅರ್ಜಿಯನ್ನು ವಜಾಗೊಳಿಸಿದ್ದಾರೆ. ಪ್ರಕರಣ ಇನ್ನೂ ತನಿಖಾ ಹಂತದಲ್ಲಿದ್ದು, ಸಾಕ್ಷ್ಯಾಧಾರಗಳು, ದಾಖಲೆಗಳು ಹಾಗೂ ವಿಧಿವಿಜ್ಞಾನ ಪ್ರಯೋಗಾ ಲಯದ (ಎಫ್‌ಎಸ್‌ಎಲ್) ವರದಿಗಳು ಬರುವುದು ಬಾಕಿಯಿದೆ. ಈ ಹಂತದಲ್ಲಿ ಜಾಮೀನು ನೀಡಿದರೆ ಸಾಕ್ಷ್ಯನಾಶದ ಸಾಧ್ಯತೆ ಇರುವುದನ್ನು ಪರಿಗಣಿಸಿ ನ್ಯಾಯಾಲಯ ಈ ನಿರ್ಧಾರ ಕೈಗೊಂಡಿದೆ ಎಂದು ನೀಡಿರುವ ಮಾಹಿತಿಯಲ್ಲಿ ತಿಳಿಸಲಾಗಿದೆ.

ಸರ್ಕಾರದ ಪರವಾಗಿ ಪ್ರಧಾನ ಸರ್ಕಾರಿ ಅಭಿಯೋಜಕ ಗುರುಲಿಂಗಪ್ಪ ಶ್ರೀಮಂತ ತೇಲಿ ಅವರು ವಾದ ಮಂಡಿಸಿದ್ದರು.

# ವಿವಾಹ ನಡೆದ ಮೂರು ತಿಂಗಳ ಒಳಗಡೆ ವಧು-ವರರ ದಾಖಲಾತಿಗಳನ್ನು ಜಿಲ್ಲಾ ಕಚೇರಿಗೆ ಸಲ್ಲಿಸಿ ಸೌಲಭ್ಯ ಪಡೆಯಲು ಅವಕಾಶ

**ಬೀದರ,ಅ.24:** ಆರ್ಥಿಕವಾಗಿ ಹಿಂದುಳಿದಿರುವ ಅಲ್ಪಸಂಖ್ಯಾತ ಸಮುದಾಯದ ಸರಳ ವಿವಾಹದ ಪ್ರೋತ್ಸಾಹ ಸೌಲಭ್ಯಕ್ಕೆ ಅರ್ಜಿ ಆಹ್ವಾನಿಸಲಾಗಿದೆ ಎಂದು ಬೀದರ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ತಿಳಿಸಿದ್ದಾರೆ.

ಕರ್ನಾಟಕ ರಾಜ್ಯದ ಅಲ್ಪಸಂಖ್ಯಾತ ಸಮುದಾಯಕ್ಕೆ ಸೇರಿದ ಮುಸ್ಲಿಮ್, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ ಮತ್ತು ಪಾರ್ಸಿ ಜನಾಂಗಕ್ಕೆ ಸೇರಿದ ನವ ಜೋಡಿಗಳು ಸಾಮೂಹಿಕ ವಿವಾಹ ಕೇಂದ್ರಗಳಲ್ಲಿ ಸರಳ ವಿವಾಹವಾಗುವ ಪ್ರತಿ ಜೋಡಿಗೆ ರೂ.50,000 ಗಳ ಪ್ರೋತ್ಸಾಹ ಧನ ನೀಡುವುದಾಗಿ ಘೋಷಿಸಿರುತ್ತಾರೆ. ಅದರಂತೆ, ಅಲ್ಪಸಂಖ್ಯಾತರ ನಿರ್ದೇಶನಾಲಯದಿಂದ ಸಾಮೂಹಿಕ ವಿವಾಹ ಆಯೋಜಕರೆಂದು ನೋಂದಣಿಯಾಗಿರುವ ಖಾಸಗಿ ಟ್ರಸ್ಟ್‌ಗಳು, ದೇವಸ್ಥಾನದ ಟ್ರಸ್ಟ್‌ಗಳು, ಸಂಘ-ಸಂಸ್ಥೆಗಳು, ವಕ್ಸ್ ಸಂಸ್ಥೆಗಳು ಹಾಗೂ ಖಾಸಗಿ ವ್ಯಕ್ತಿಗಳು ಸಾಮೂಹಿಕ ವಿವಾಹ ನಡೆಸುವವರಿಗೆ ಪ್ರತಿ ಜೋಡಿಗೆ ತಲಾ ರೂ.5,000 ಹಾಗೂ ವಿವಾಹವಾಗುವ ಪ್ರತಿ ನವ ಜೋಡಿಗೆ ರೂ.50,000 ಗಳ ಮಂಜೂರಾತಿ ನೀಡಿ ಆದೇಶಿಸಿರುತ್ತಾರೆ. ಸಾಮೂಹಿಕ ವಿವಾಹ ಹಮ್ಮಿಕೊಳ್ಳುವ ಆಯೋಜಕರು ಕನಿಷ್ಠ 7 ದಿನ ಮುಂಚಿತವಾಗಿ ತಮ್ಮ ಜಿಲ್ಲೆಯ ಅಲ್ಪಸಂಖ್ಯಾತ ಕಲ್ಯಾಣ ಇಲಾಖೆಯ ಕಚೇರಿಗೆ ಭೇಟಿ ನೀಡಿ ಅರ್ಜಿ ಸಲ್ಲಿಸಬೇಕು. ವಿವಾಹ ನಡೆದ ಮೂರು ತಿಂಗಳ ಒಳಗಡೆ ವಧು-ವರರ ದಾಖಲಾತಿಗಳನ್ನು ಜಿಲ್ಲಾ ಕಚೇರಿಗೆ ಕಡ್ಡಾಯವಾಗಿ ಸಲ್ಲಿಸಬೇಕು.

ಷರತ್ತುಗಳು : ಕನಿಷ್ಠ 5 ನವ ಜೋಡಿಗಳಿಗೆ ಸಾಮೂಹಿಕ ವಿವಾಹ ಏರ್ಪಡಿಸಬೇಕು. ಇದು ನವ ಜೋಡಿಯ ಮೊದಲನೇ ವಿವಾಹವಾಗಿರಬೇಕು. ವಧುವಿನ ವಯಸ್ಸು 18 ರಿಂದ 42 ವರ್ಷಗಳ ಒಳಗಿರಬೇಕು.ವರನ ವಯಸ್ಸು 21 ರಿಂದ 45 ವರ್ಷಗಳ ಒಳಗಿರಬೇಕು. ಕುಟುಂಬದ ವಾರ್ಷಿಕ ಆದಾಯ ರೂ. 2.50 ಲಕ್ಷ ಹಾಗೂ ವಧು-ವರರ ಒಟ್ಟು ಆದಾಯ ರೂ. 5 ಲಕ್ಷ ಮೀರಬಾರದು.ಜೀವನದಲ್ಲಿ ಒಮ್ಮೆ ಮತ್ತು ಕುಟುಂಬದಲ್ಲಿ ಒಬ್ಬರು ಮಾತ್ರ ಈ ಸೌಲಭ್ಯ ಪಡೆಯಬಹುದು. ರಾಜ್ಯ ಸರ್ಕಾರದ ಈ ಯೋಜನೆಯು ಅಲ್ಪಸಂಖ್ಯಾತ ಸಮುದಾಯದ ದಂಪತಿಗಳಿಗೆ ಹಣಕಾಸಿನ ನೆರವು ನೀಡುತ್ತದೆ. ಇದರಿಂದಾಗಿ ಅವರು ಯಾವುದೇ ಹೆಚ್ಚುವರಿ ಆರ್ಥಿಕ ಹೊರೆಯಿಲ್ಲದೆ ಸರಳವಾಗಿ ವಿವಾಹವಾಗಲು ಸಾಧ್ಯ ವಾಗುತ್ತದೆ. ಇಂದಿನ ದಿನಗಳಲ್ಲಿ ಮದುವೆಗಳಲ್ಲಿ ಸಾವಿರಾರು ರೂಪಾಯಿಗಳ ಆಹಾರ, ಅತಿಶ ಯದ ಹೂವಿನ ಅಲಂಕಾರ ಹಾಗೂ ಆಡಂಬರವು ಆರ್ಥಿಕ ಬಾಧೆಗೆ ಕಾರಣವಾಗುತ್ತಿದ್ದು, ಈ

## ಮೊದಲನೇ ಪುಟದಿಂದ

# ಸ್ಮಶಾನದಲ್ಲಿ ಹೂತ ಶವಗಳ ಅವಶೇಷ ಸಾಗಾಟ ಆರೋಪ: ಮೂವರು ಪೊಲೀಸ್ ವಶಕ್ಕೆ

ಈ ಕುರಿತು ಪ್ರತಿಕ್ರಿಯಿಸಿದ ಬಡಾವಣೆ ಮುಖಂಡ ರವೀಂದ್ರ ಜಲ್ದಾರ್, ಹಲವು ದಿನಗಳಿಂದ ಸ್ಮಶಾನದಲ್ಲಿ ಹೂತ ಶವಗಳ ಅವಶೇಷಗಳನ್ನು ಸಾಗಿಸುತ್ತಿರುವ ಬಗ್ಗೆ ದೂರುಗಳು ಕೇಳಿಬರುತ್ತಿದ್ದವು. ಸ್ಥಳೀಯರು ನೀಡಿದ ಮಾಹಿತಿ ಆಧರಿಸಿ ಪೊಲೀಸರಿಗೆ ವಿಷಯ ತಿಳಿಸಲಾಗಿದ್ದು, ಸ್ಥಳಕ್ಕೆ ಬಂದ ಪೊಲೀಸರು ಇಬ್ಬರು ಕಾಲೇಜು ಸಿಬ್ಬಂದಿ ಸೇರಿದಂತೆ ಮೂವರನ್ನು ವಶಕ್ಕೆ ಪಡೆದಿದ್ದಾರೆ ಎಂದು ತಿಳಿಸಿದರು.

ಸ್ಮಶಾನದಲ್ಲಿ ಹೂಳಲಾದ ಶವಗಳ ಅವಶೇಷಗಳನ್ನು ಅನುಮತಿಯಿಲ್ಲದೆ ಹೊರತೆಗೆಯುವುದು ಗಂಭೀರ ವಿಷಯವಾಗಿದೆ. ಈ ಪ್ರಕರಣದ ಹಿಂದೆ ಯಾರಿದ್ದಾರೆ, ಯಾವ ಉದ್ದೇಶಕ್ಕಾಗಿ ಅವಶೇಷಗಳನ್ನು ಸಾಗಿಸಲಾಗುತ್ತಿತ್ತು ಎಂಬುದರ ಕುರಿತು ಸಮಗ್ರ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ರವೀಂದ್ರ ಜಲ್ದಾರ್ ಆಗ್ರಹಿಸಿದರು.

ಪ್ರಕರಣಕ್ಕೆ ಸಂಬಂಧಿಸಿದಂತೆ ನೇತಾಜಿ ನಗರ ಠಾಣೆ ಪೊಲೀಸರು ವಿಚಾರಣೆ ಮುಂದುವರಿಸಿದ್ದು, ಶವಗಳ ಅವಶೇಷಗಳ ಸಾಗಾಟದ ಹಿಂದಿನ ನಿಖರ ಉದ್ದೇಶ ಹಾಗೂ ಆರೋಪಗಳ ಸತ್ಯಾಸತ್ಯತೆ ತನಿಖೆಯಿಂದ ಹೊರಬರಬೇಕಿದೆ.

# ಅ. 25ರಿಂದ ನ.04 ರವರೆಗೆ ಗಣೇಕಲ್ ಜಲಾಶಯಕ್ಕೆ ನೀರು ತುಂಬಿಸಲು ಕ್ರಮ: ಜಿಲ್ಲಾಧಿಕಾರಿ ಪೂವಿತಾ ಎಸ್.

ನೀರಿನ ಪ್ರಮಾಣ ಸ್ವಲ್ಪ ಕಡಿಮೆಯಾಗಲಿದೆ. ಸಾಧ್ಯವಾದಷ್ಟು ಮೇಲ್ಭಾಗದ ಹಾಗೂ ಮಧ್ಯಭಾಗದ ವಿತರಣಾ ಕಾಲುವೆಗಳ ಜೊತೆಗೆ ಕೆಳಭಾಗದ ರೈತರಿಗೂ ಸರದಿ ಪ್ರಕಾರ ನೀರು ಒದಗಿಸುವ ಕುರಿತು ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಚರ್ಚಿಸಲಾಗಿದೆ. ಕಾಲುವೆಗಳಲ್ಲಿ ನೀರಿನ ಅನಧಿಕೃತ ಬಳಕೆಯನ್ನು ತಡೆಯಲು ಕಟ್ಟುನಿಟ್ಟಿನ ನಿಷೇಧ ಜಾರಿಗೊಳಿಸಲಾಗುವುದು ಎಂದರು.

ಜಿಲ್ಲೆಯ ರೈತರು, ರೈತ ಮುಖಂಡರು ಹಾಗೂ ಜನಪ್ರತಿನಿಧಿಗಳು ಐಸಿಸಿ ಸಭೆಯಲ್ಲಿ ಭಾಗವಹಿಸಿದ್ದು, ನೀರಿನ ಸಮರ್ಪಕ ಹಂಚಿಕೆಗೆ ಎಲ್ಲರೂ ಸಹಕಾರ ನೀಡಬೇಕು. ಮುಂದಿನ ದಿನಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ತೀವ್ರಗೊಳ್ಳುವ ಸಾಧ್ಯತೆ ಇರುವುದರಿಂದ ರೈತರು ರಸ್ತೆ ತಡೆ ಅಥವಾ ಇತರ ಪ್ರತಿಭಟನೆಗಳಿಗೆ ಮುಂದಾಗದೆ ಅಧಿಕಾರಿಗಳೊಂದಿಗೆ ಸಹಕರಿಸಬೇಕು ಎಂದು ಜಿಲ್ಲಾಧಿಕಾರಿ ಮನವಿ ಮಾಡಿದರು.

ಈ ಸಂದರ್ಭದಲ್ಲಿ ನೀರಾವರಿ ಇಲಾಖೆ ಹಾಗೂ ಜಿಲ್ಲಾಧಿಕಾರಿಗಳ ಕಚೇರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಎರಡು ತಿಂಗಳ ಹಸುಗೂಸಿನ ಹೊಟ್ಟೆಯಲ್ಲಿ ಮತ್ತೊಂದು ಭ್ರೂಣ ಪತ್ತೆ! ವೈದ್ಯಕೀಯ ಲೋಕಕ್ಕೆ ಅಚ್ಚರಿ ಮೂಡಿಸಿದ ಅಪರೂಪದ ಪ್ರಕರಣ

ದೇಹದೊಳಗೆ ಕಂಡುಬಂದಿರುವ ಭ್ರೂಣವನ್ನು ಶಸ್ತ್ರಚಿಕಿತ್ಸೆಯ ಮೂಲಕ ಹೊರತೆಗೆಯಬೇಕಾಗಿದ್ದು, ಮಗುವಿನ ವಯಸ್ಸು ಹಾಗೂ ಆರೋಗ್ಯ ಸ್ಥಿತಿಯನ್ನು ಪರಿಗಣಿಸಿ ಅತ್ಯಂತ ಎಚ್ಚರಿಕೆಯಿಂದ ಚಿಕಿತ್ಸೆ ನೀಡಬೇಕಾಗಿದೆ. ಬೆಂಗಳೂರಿನ ತಜ್ಞ ವೈದ್ಯರು ಮಗುವಿಗೆ ಶಸ್ತ್ರಚಿಕಿತ್ಸೆ ನಡೆಸಲು ಮುಂದಾಗಿದ್ದು, ಅದರ ನಂತರವೇ ಆರೋಗ್ಯದ ಕುರಿತು ಹೆಚ್ಚಿನ ಮಾಹಿತಿ ಲಭ್ಯವಾಗಲಿದೆ ಎಂದು ತಿಳಿದುಬಂದಿದೆ.

ಈ ಕುರಿತು ಮಾಹಿತಿ ನೀಡಿರುವ ಸಹನಾ ಆಸ್ಪತ್ರೆಯ ವೈದ್ಯ ಡಾ.ಶಿವರಾಜ ಪಾಟೀಲ್, ರಾಜ್ಯದಲ್ಲಿ ಇದುವರೆಗೆ ವರದಿಯಾಗಿರುವ ಇಂತಹ ಪ್ರಕರಣಗಳಲ್ಲಿ ಇದು ಮೂರನೆಯದು ಎಂದು ತಿಳಿಸಿದ್ದಾರೆ. ಮಗುವಿನ ಆರೋಗ್ಯದಲ್ಲಿ ಹಲವು ಸಮಸ್ಯೆಗಳಿರುವುದರಿಂದ ಉನ್ನತ ಮಟ್ಟದ ಚಿಕಿತ್ಸೆ ಅಗತ್ಯವಾಗಿದೆ ಎಂದು ಹೇಳಿದ್ದಾರೆ.

ಹೆಚ್ಚಿನ ಚಿಕಿತ್ಸೆಗೆ ಬೆಂಗಳೂರಿಗೆ ರವಾನಿಸಲಾಗಿರುವ ಹಸುಗೂಸಿನ ಆರೋಗ್ಯ ಸ್ಥಿತಿಯ ಬಗ್ಗೆ ಪಾಲಕರಲ್ಲಿ ಆತಂಕ ಮನೆಮಾಡಿದ್ದು, ಶಸ್ತ್ರಚಿಕಿತ್ಸೆಯ ಫಲಿತಾಂಶದ ಮೇಲೆ ಎಲ್ಲರ ಗಮನ ನೆಟ್ಟಿದೆ. ಅಪರೂಪದ ವೈದ್ಯಕೀಯ ಸಮಸ್ಯೆಯನ್ನು ಆರಂಭಿಕ ಹಂತದಲ್ಲಿಯೇ ಗುರುತಿಸಿ ಸೂಕ್ತ ಚಿಕಿತ್ಸೆಗೆ ವ್ಯವಸ್ಥೆ ಕಲ್ಪಿಸಿರುವ ಸಿಂಧನೂರಿನ ವೈದ್ಯರ ಕಾರ್ಯ ಗಮನ ಸೆಳೆದಿದೆ.

ಈ ಕುರಿತು ಪ್ರತಿಕ್ರಿಯಿಸಿದ ಸಹನಾ ಆಸ್ಪತ್ರೆಯ ಡಾ.ಶಿವರಾಜ ಪಾಟೀಲ್, 'ಇಂತಹ ಪ್ರಕರಣಗಳು ವೈದ್ಯರ ವೃತ್ತಿಜೀವನದಲ್ಲಿಯೇ ಅತ್ಯಂತ ವಿರಳವಾಗಿ ಎದುರಾಗುತ್ತವೆ. ಎರಡು ತಿಂಗಳ ಮಗುವನ್ನು ಪಾಲಕರು ನಮ್ಮ ಆಸ್ಪತ್ರೆಗೆ ಕರೆತಂದಾಗ ಪರೀಕ್ಷೆಯಲ್ಲಿ ಹೊಟ್ಟೆಯೊಳಗೆ ಭ್ರೂಣ ಇರುವುದು ಕಂಡುಬಂದಿದೆ. ಮಗುವಿನ ಆರೋಗ್ಯದಲ್ಲಿ ಹಲವು ಸಮಸ್ಯೆಗಳಿರುವುದರಿಂದ ಪ್ರಾಥಮಿಕ ಚಿಕಿತ್ಸೆ ನೀಡಿ ಬೆಂಗಳೂರಿನ ಉನ್ನತ ಆಸ್ಪತ್ರೆಗೆ ರವಾನಿಸಿದ್ದೇವೆ. ನಮ್ಮ ಮಾಹಿತಿಯ ಪ್ರಕಾರ ರಾಜ್ಯದಲ್ಲಿ ಇದು ಮೂರನೇ ಪ್ರಕರಣವಾಗಿದೆ. ಇಂದು ಅಥವಾ ನಾಳೆ ಶಸ್ತ್ರಚಿಕಿತ್ಸೆ ನಡೆಯುವ ಸಾಧ್ಯತೆಯಿದ್ದು, ನಂತರ ಮಗುವಿನ ಆರೋಗ್ಯದ ಬಗ್ಗೆ ಸ್ಪಷ್ಟ ಮಾಹಿತಿ ದೊರೆಯಲಿದೆ' ಎಂದು ತಿಳಿಸಿದ್ದಾರೆ.

# ಕಿರಾಣಿ ಅಂಗಡಿ ಮಾಲೀಕನ ಕೊಲೆ ಖಂಡಿಸಿ ಎಸ್‌ಪಿ ಕಚೇರಿಗೆ ಆರ್ಯವೈಶ್ಯ ಸಮಾಜದ ಮುತ್ತಿಗೆ: ಆರೋಪಿಗಳ ಬಂಧನಕ್ಕೆ 24 ಗಂಟೆಗಳ ಗಡುವು

ಕಾರಣಕ್ಕಾಗಿ ಅಂಗಡಿ ಮಾಲೀಕನನ್ನು ಹತ್ಯೆ ಮಾಡಿರುವುದು ಅತ್ಯಂತ ಖಂಡನೀಯವಾಗಿದ್ದು, ಇಂತಹ ಘಟನೆಗಳು ಸಾರ್ವಜನಿಕರಲ್ಲಿ ಆತಂಕ ಮೂಡಿಸುತ್ತಿವೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕೊಲೆ ಪ್ರಕರಣವನ್ನು ಪೊಲೀಸ್ ಇಲಾಖೆ ಗಂಭೀರವಾಗಿ ಪರಿಗಣಿಸಿ, ಕೃತ್ಯದಲ್ಲಿ ಭಾಗಿಯಾಗಿರುವ ಆರೋಪಿಗಳನ್ನು ತಕ್ಷಣ ಪತ್ತೆಹಚ್ಚಿ ಬಂಧಿಸಬೇಕು. ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಿದರು.

ಆರೋಪಿಗಳನ್ನು 24 ಗಂಟೆಗಳೊಳಗೆ ಬಂಧಿಸಬೇಕು. ಇಲ್ಲವಾದಲ್ಲಿ ಆರ್ಯವೈಶ್ಯ ಸಮಾಜದ ವತಿಯಿಂದ ಉಗ್ರ ಪ್ರತಿಭಟನೆ ನಡೆಸುವುದು ಅನಿವಾರ್ಯವಾಗಲಿದೆ ಎಂದು ಸಮಾಜದ ಮುಖಂಡರು ಎಚ್ಚರಿಕೆ ನೀಡಿದರು.

ಘಟನೆಗೆ ಸಂಬಂಧಿಸಿದಂತೆ ಆರ್ಯವೈಶ್ಯ ಸಮಾಜದ ಅಧ್ಯಕ್ಷೆ ಸಾವಿತ್ರಿ ಪುರುಷೋತ್ತಮ ಅವರು ಮಾಹಿತಿ ನೀಡಿದ್ದು, ನರಸಿಂಹ ಅವರ ಹತ್ಯೆಯಿಂದ ಸಮಾಜದ ಜನರಲ್ಲಿ ತೀವ್ರ ಆಕ್ರೋಶ ವ್ಯಕ್ತವಾಗಿದೆ. ಮೃತರ ಕುಟುಂಬಕ್ಕೆ ನ್ಯಾಯ ದೊರಕಿಸಿಕೊಡುವ ನಿಟ್ಟಿನಲ್ಲಿ ಪೊಲೀಸ್ ಇಲಾಖೆ ಶೀಘ್ರ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

# 41ನೇ ರಾಜ್ಯಮಟ್ಟದ ಪತ್ರಕರ್ತರ ಸಮ್ಮೇಳನ ಯಶಸ್ಸಿಗೆ ಎಲ್ಲರೂ ಒಗ್ಗಟ್ಟಿನಿಂದ ಶ್ರಮಿಸಿ: ಆರ್. ಗುರುನಾಥ

ನೆರವು ಪಡೆಯಲು ಮುಂದಾಗಬೇಕು. ಪ್ರತಿಯೊಬ್ಬರೂ ತಮ್ಮ ಸಾಮರ್ಥ್ಯಕ್ಕೆ ಅನುಗುಣವಾಗಿ ಸಮ್ಮೇಳನದ ಯಶಸ್ಸಿಗೆ ಕೊಡುಗೆ ನೀಡಬೇಕು ಎಂದು ಮನವಿ ಮಾಡಿದರು.

ಜಿಲ್ಲೆಯ ಎಲ್ಲ ತಾಲೂಕುಗಳ ಪತ್ರಕರ್ತರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಸಮ್ಮೇಳನದ ಸಿದ್ಧತೆಗಳನ್ನು ಕೈಗೊಳ್ಳಲಾಗುತ್ತಿದೆ. ಈ ಉದ್ದೇಶದಿಂದ ಜಿಲ್ಲಾ ಸಮಿತಿಯು ತಾಲೂಕುಗಳಿಗೆ ಭೇಟಿ ನೀಡಿ ಪೂರ್ವಭಾವಿ ಸಭೆಗಳನ್ನು ನಡೆಸುತ್ತಿದ್ದು, ಸ್ಥಳೀಯ ಪತ್ರಕರ್ತರ ಸಲಹೆ ಮತ್ತು ಅಭಿಪ್ರಾಯಗಳನ್ನು ಸಂಗ್ರಹಿಸಲಾಗುತ್ತಿದೆ. ಎಲ್ಲರ ಸಹಭಾಗಿತ್ವದೊಂದಿಗೆ ಸಮ್ಮೇಳನದ ರೂಪುರೇಷೆಗಳನ್ನು ಸಿದ್ಧಪಡಿಸಲಾಗುವುದು ಎಂದು ವಿವರಿಸಿದರು.

ಹಿರಿಯ ಪತ್ರಕರ್ತ ಗುರುರಾಜ್ ಗೌಡೂರ ಮಾತನಾಡಿ, ರಾಜ್ಯಮಟ್ಟದ ಪತ್ರಕರ್ತರ ಸಮ್ಮೇಳನವನ್ನು ಆಯೋಜಿಸುವುದು ದೊಡ್ಡ ಜವಾಬ್ದಾರಿಯಾಗಿದೆ. ಇಂತಹ ಅವಕಾಶ ರಾಯಚೂರು ಜಿಲ್ಲೆಗೆ ದೊರೆತಿರುವುದು ಸಂತಸದ ವಿಷಯ. ಸಂಘದ ಎಲ್ಲ ಸದಸ್ಯರು ಪರಸ್ಪರ ಸಹಕಾರದಿಂದ ಕೆಲಸ ಮಾಡಿದಾಗ ಮಾತ್ರ ಕಾರ್ಯಕ್ರಮವನ್ನು ಯಶಸ್ವಿಯಾಗಿ ನಡೆಸಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಸಭೆಯಲ್ಲಿ ಸಮ್ಮೇಳನದ ಪೂರ್ವಸಿದ್ಧತೆ, ಸಂಘಟನಾ ಜವಾಬ್ದಾರಿಗಳು, ಆರ್ಥಿಕ ಸಂಪನ್ಮೂಲ ಸಂಗ್ರಹಣೆ ಹಾಗೂ ತಾಲೂಕು ಮಟ್ಟದ ಪತ್ರಕರ್ತರ ಸಹಭಾಗಿತ್ವ ಕುರಿತು ಚರ್ಚಿಸಲಾಯಿತು.

ಈ ಸಂದರ್ಭದಲ್ಲಿ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಿದ್ದಯ್ಯಸ್ವಾಮಿ ಕುಕನೂರು, ಖಜಾಂಚಿ ಮಲ್ಲಿಕಾರ್ಜುನಯ್ಯ, ಮಹಾನಂದ ನಾಯಕ, ತಾಲೂಕು ಅಧ್ಯಕ್ಷ ಶಿವರಾಜ ಕೆಂಭಾವಿ, ಜಿಲ್ಲಾ ಸಮಿತಿ ಸದಸ್ಯ ಶರಣಯ್ಯ ಒಡೆಯರ್, ರಾಘವೇಂದ್ರ ಗುಮಾಸ್ತೆ, ಡಾ. ಶರಣಪ್ಪ ಆನೆಹೊಸೂರು, ಸಿದ್ದನಗೌಡ ಪಾಟೀಲ್, ಹನುಮಂತ ನಾಯಕ, ತಾಲೂಕು ಪ್ರಧಾನ ಕಾರ್ಯದರ್ಶಿ ಗಂಗಾಧರ ನಾಯಕ, ಚಂದ್ರಶೇಖರ್ ಸೇರಿದಂತೆ ತಾಲೂಕು ಸಮಿತಿ ಪದಾಧಿಕಾರಿಗಳು ಹಾಗೂ ಲಿಂಗಸುಗೂರು, ಹಟ್ಟಿ ಮತ್ತು ಮುದಗಲ್‌ನ ಪತ್ರಕರ್ತರು ಉಪಸ್ಥಿತರಿದ್ದರು.

## ಅಮೃತ ವಾಣಿ

ನಿನ್ನ ಜೀವನವನ್ನು ಬದಲಾಯಿಸಲು ಹೊರಗಿನ ಜಗತ್ತನ್ನು ಬದಲಾಯಿಸುವ ಅಗತ್ಯವಿಲ್ಲ.




# ಕಲ್ಯಾಣ ಕರ್ನಾಟಕದ ಅಭಿವೃದ್ಧಿ ಹಾಗೂ 371(ಜೆ) ಪರಿಣಾಮಕಾರಿ ಜಾರಿಗೆ ಒತ್ತಾಯಿಸಿ ಸೈಕಲ್ ಜಾಗೃತಿ ಯಾತ್ರೆ

ಅವಕಾಶಗಳಿಂದ ವಂಚಿತರಾಗಬಾರದು ಎಂದು ಹೇಳಿದರು.

ಈ ಭಾಗದ ಜನರ ನ್ಯಾಯಯುತ ಹಕ್ಕುಗಳನ್ನು ರಕ್ಷಿಸುವುದು, ಪ್ರಾದೇಶಿಕ ಅಸಮಾನತೆ ನಿವಾರಣೆಗೆ ಒತ್ತಾಯಿಸುವುದು ಹಾಗೂ ಅಭಿವೃದ್ಧಿ ಯೋಜನೆಗಳ ಪರಿಣಾಮಕಾರಿ ಅನುಷ್ಠಾನಕ್ಕೆ ಸರ್ಕಾರದ ಗಮನ ಸೆಳೆಯುವುದು ಸೈಕಲ್ ಯಾತ್ರೆಯ ಉದ್ದೇಶವಾಗಿದೆ. ಕಲ್ಯಾಣ ಕರ್ನಾಟಕದ ಜ್ವಲಂತ ಸಮಸ್ಯೆಗಳಿಗೆ ಪರಿಹಾರ ದೊರಕಿಸಿಕೊಡುವ ನಿಟ್ಟಿನಲ್ಲಿ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ ಎಂದು ವಿವರಿಸಿದರು.

ಕಲಬುರಗಿಯಿಂದ ಬಳ್ಳಾರಿವರೆಗೆ ನಡೆಯುವ ಈ ಜಾಗೃತಿ ಯಾತ್ರೆಯ ಮೂಲಕ ವಿವಿಧ ಪ್ರದೇಶಗಳ ಜನರನ್ನು ಸಂಪರ್ಕಿಸಿ, 371(ಜೆ) ಕಲಂನ ಮಹತ್ವ ಹಾಗೂ ಅದರಡಿ ದೊರೆಯುವ ಸೌಲಭ್ಯಗಳ ಕುರಿತು ಮಾಹಿತಿ ನೀಡಲಾಗುವುದು. ಕಲ್ಯಾಣ ಕರ್ನಾಟಕದ ಸಮಗ್ರ ಅಭಿವೃದ್ಧಿಗೆ ಸರ್ಕಾರ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಒತ್ತಾಯಿಸಲಾಗುವುದು ಎಂದರು.

ಈ ಜಾಗೃತಿ ಅಭಿಯಾನಕ್ಕೆ ವಿವಿಧ ಸಂಘಟನೆಗಳ ಪದಾಧಿಕಾರಿಗಳು, ರೈತರು, ಯುವಜನತೆ ಹಾಗೂ ಸಾರ್ವಜನಿಕರು ಬೆಂಬಲ ನೀಡಬೇಕು. ಪ್ರಾದೇಶಿಕ ಅಭಿವೃದ್ಧಿ ಮತ್ತು ಜನರ ಹಕ್ಕುಗಳ ರಕ್ಷಣೆಗಾಗಿ ಎಲ್ಲರೂ ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಬೇಕು ಎಂದು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ರೈತ ಸಂಘದ ಜಿಲ್ಲಾಧ್ಯಕ್ಷ ಶಿವಪುತ್ರಗೌಡ ನಂದಿಹಾಳ, ಕೆಆರ್‌ಎಸ್ ಪಕ್ಷದ ವಿಜಯ ಪೋಳ, ನಿವೃತ್ತ ಸೈನಿಕ ಶೇಖರಪ್ಪ ಗೋನವಾರ, ಜಲಾಲುದ್ದೀನ್, ವಿಶ್ವನಾಥ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಪತ್ರಿಕಾ ಭವನದ ಸಭಾಭವನ ನಿರ್ಮಾಣ ಕಾಮಗಾರಿಗೆ ಆರ್. ಗುರುನಾಥ ಮೆಚ್ಚುಗೆ

ನಡೆಸಲು ಇಂತಹ ಅಭಿವೃದ್ಧಿ ಕಾರ್ಯಗಳು ಸಹಕಾರಿಯಾಗಲಿವೆ ಎಂದು ಹೇಳಿದರು.

ಪತ್ರಕರ್ತರು ಪರಸ್ಪರ ಸಹಕಾರ ಮತ್ತು ಒಗ್ಗಟ್ಟಿನಿಂದ ಕಾರ್ಯನಿರ್ವಹಿಸುವ ಮೂಲಕ ಸಂಘಟನೆಯನ್ನು ಬಲಪಡಿಸಬೇಕು. ಪತ್ರಕರ್ತರ ಹಿತಾಸಕ್ತಿ ಹಾಗೂ ವೃತ್ತಿಪರ ಅಭಿವೃದ್ಧಿಗೆ ಸಂಬಂಧಿಸಿದ ಚಟುವಟಿಕೆಗಳಿಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಿದ್ದಯ್ಯ ಸ್ವಾಮಿ, ಲಿಂಗಸುಗೂರು ತಾಲೂಕು ಪತ್ರಕರ್ತರ ಸಂಘದ ಅಧ್ಯಕ್ಷ ಶಿವರಾಜ ಕೆಂಭಾವಿ ಸೇರಿದಂತೆ ಜಿಲ್ಲಾ ಹಾಗೂ ತಾಲೂಕು ಮಟ್ಟದ ಪತ್ರಕರ್ತರು ಉಪಸ್ಥಿತರಿದ್ದರು.

# ದ್ವೇಷ ಮರೆತು ಪ್ರೀತಿ ಹಂಚುವುದೆ ದಸರಾ ಹಬ್ಬದ ವಿಶೇಷ

**ಲಿಂಗಸಗೂರ:ಅ.23** ಬನ್ನಿ ಮರವನ್ನು ಪೂಜಿಸುವುದು ವಿಜಯ, ಶಕ್ತಿ ಮತ್ತು ಶುಭದ ಸಂಕೇತವೆಂದು ಪರಿಗಣಿಸಲಾಗುತ್ತದೆ.

ಪಾಂಡವರ ಕಥೆ: ಮಹಾಭಾರತದ ಜನಪ್ರಿಯ ನಂಬಿಕೆಯ ಪ್ರಕಾರ, ಅಜ್ಞಾತವಾಸದ ಸಮಯದಲ್ಲಿ ಪಾಂಡವರು ತಮ್ಮ ಆಯುಧಗಳನ್ನು ಶಮಿ ಮರದಲ್ಲಿ ಬಚ್ಚಿಟ್ಟಿದ್ದರು ಎಂಬ ನಂಬಿಕೆ ಇದೆ.

ವಿಜಯದಶಮಿಯಂದು ಅವುಗಳನ್ನು ಮರಳಿ ಪಡೆದುಕೊಂಡರು. ಬನ್ನಿ ಎಲೆಗಳನ್ನು ಪರಸ್ಪರ ವಿನಿಮಯ ಮಾಡಿಕೊಂಡು ಶುಭ ಹಾರೈಸುವ ಸಂಪ್ರದಾಯ ನಮ್ಮ ಉತ್ತರ ಕರ್ನಾಟಕ ಭಾಗದಲ್ಲಿ ಆಚರಣೆ ಮಾಡುತ್ತಾರೆ.

ಮನೆಮಂದಿ ಹಾಗೂ ಗ್ರಾಮಸ್ಥರು ಸುಖ, ಶಾಂತಿ, ಆರೋಗ್ಯ ಮತ್ತು ಸಮೃದ್ಧಿ ದೊರೆಯಲಿ ಎಂದು ಪ್ರಾರ್ಥಿಸುತ್ತಾರೆ.

ಬನ್ನಿ ತಗೊಂಡು ಬಂಗಾರ ಆಗಿರೋಣ ಎಂದು ಪರಸ್ಪರ ಹಾರೈಸಿಕೊಳ್ಳುವರು

ಬನ್ನಿ ಹಬ್ಬವು ಕೇವಲ ಎಲೆಗಳನ್ನು ವಿನಿಮಯ ಮಾಡಿಕೊಳ್ಳುವ ಆಚರಣೆಯಲ್ಲ. ಅದು ಸ್ನೇಹ, ಸಹೋದರತ್ವ, ಗೌರವ, ಒಗ್ಗಟ್ಟು ಮತ್ತು ವಿಜಯದ ಸಂಕೇತವಾಗಿದೆ. ಉತ್ತರ ಕರ್ನಾಟಕದ ಜನಪದ ಸಂಸ್ಕೃತಿಯಲ್ಲಿ ಈ ಹಬ್ಬಕ್ಕೆ ವಿಶೇಷ ಸ್ಥಾನವಿದೆ.





# ಅಂತರಾಷ್ಟ್ರೀಯ ಬೌದ್ಧ ಮಹಾಸಮ್ಮೇಳನ: ತಿಪ್ಪಣ್ಣ ಬಾಗಲವಾಡ

**ಮಾನ್ವಿ.ಅ.23** ಪಟ್ಟಣದ ಪತ್ರಿಕಾ ಭವನದಲ್ಲಿ ತಿಪ್ಪಣ್ಣ ಬಾಗಲವಾಡ ವಕೀಲರು ಮಾತನಾಡಿ ರಾಜ್ಯದ ಚಾಮರಾಜನಗರ ಜಿಲ್ಲೆಯ ಡಾ.ಬಿ.ಆರ್.ಅಂಬೇಡ್ಕರ್ ಕ್ರೀಡಾಂಗಣದಲ್ಲಿ,25 ಎರಡು ದಿನಗಳಕಾಲ ಅಂತರಾಷ್ಟ್ರಿಥಯ ಬೌದ್ಧಮಹಾಸಮ್ಮೇಳನವು ಪೂಜ್ಯ ಮನೋರಕ್ಷಿತ ಬಂತೇಜಿ, ಶಾಸಕರಾದ ಎ.ಆರ್.ಕೃಷ್ಣಮೂರ್ತಿ ಸಂಸದರಾದ ಸುನೀಲ್ ಬೋಸ್ ಹಾಗೂ ರಾಜ್ಯ ಹಾಗೂ ಅಂತರಾಷ್ಟ್ರಿಥಯ ಬೌದ್ಧ ಬಿಕ್ಕುಗಳ ನೇತೃತ್ವದಲ್ಲಿ ನಡೆಯಲಿದ್ದು ಸಮ್ಮೇಳನದಲ್ಲಿ ಅನೇಕ ಹಿರಿಯ ಸಾಹಿತಿಗಳು, ಬೌದ್ಧ ಬಿಕ್ಕುಗಳು,ಸೇರಿದಂತೆ ಉಪನ್ಯಾಸಕರು ತಮ್ಮ ವಿಚಾರಗಳನ್ನು ಮಂಡಿಸಲಿದ್ದಾರೆ ಹಾಗೂ ವಿವಿಧ ವಿಷಯಗಳ ಕುರಿತು ವಿಚಾರ ಗೋಷ್ಠಿಗಳು ಕೂಡ ನೆರವೇರಲ್ಲಿದು ಇಂದಿನ ಜಗತ್ತಿಕ ಪರಿಸ್ಥಿತಿಯಲ್ಲಿ ಯುದ್ದ ಬೇಡ ಬುದ್ದ ಬೇಕು ಎನ್ನುವ ನೀಲುವಿಗೆ ಬಂದಿರುವ ಸಮಯದಲ್ಲಿ ಪ್ರೀತಿ ,ಪ್ರೇಮ,ತ್ಯಾಗ,ಕರುಣೆ,ಮಮತೆ,ಸಮತೆಗಳ ಬಗ್ಗೆ ತಿಳಿದುಕೊಳ್ಳುವುದಕ್ಕೆ ಉತ್ತಮ ಅವಕಾಶವಿರುವುದರಿಂದ ತಾಲೂಕಿನಿಂದ ಹೆಚ್ಚಿನ ಸಂಖ್ಯೆಯಲ್ಲಿ ಬೌದ್ಧ ಹಾಗೂ ಡಾ.ಬಿ.ಆರ್. ಅಂಬೇಡ್ಕರ್ಅನುಯಾಯಿಗಳು. ಸಾರ್ವಜನಿಕರು ಅಂತರಾಷ್ಟ್ರಿಥಯ ಬೌದ್ಧಮಹಾಸಮ್ಮೇಳನದಲ್ಲಿ ಭಾಗವಹಿಸುವಂತೆ ಕರೆನೀಡಿದರು. ನರಸಪ್ಪಜೂಕುರು, ಲಕ್ಷ್ಮಣ ಜಾನೇಕಲ್, ಹನುಮಂತ ಉದ್ಬಳ್, ಹನುಮಂತ ಸೀಕಲ್,ಹನುಮಂತ್ರಾಯ ಕಪಗಲ್, ಮೌನೇಶ ಕೋರಿ,ದತ್ತಾತ್ರೇಯ ವಕೀಲರು,ಶ್ರೀನಿವಾಸ ವಕೀಲರು,ಜಗದೀಶ, ಅಮರೇಶ ನಂದಿಹಾಳ್, ಶಅಕರ್ ಜಾನೇಕಲ್, ನಾಗರೆಡ್ಡಿಸೀಕಲ್, ಬಸವರಾಜ,ನರಸಿಂಹ ಗೋರ್ಕಲ್ ,ಮಲ್ಲಿಕಾರ್ಜುನ,ನರಸಿಂಹ,ಸುರೇಶಬೈಲ್ ಮಾರ್ಚೆಡ್,ಇದ್ದರು.

# ನವರಾತ್ರಿ ಉತ್ಸವ: ಉಡಿ ತುಂಬುವ ಕಾರ್ಯಕ್ರಮ



**ಮಸ್ಕಿ.ಅ.23** ನವರಾತ್ರಿ ಉತ್ಸವದ ಅಂಗವಾಗಿ ಪಟ್ಟಣದ ಶ್ರೀ ಕಾಳಿಕಾ ದೇವಿ ದೇವಸ್ಥಾನದಲ್ಲಿ ಸೋಮವಾರ ಬಾಲ ಮಕ್ಕಳ ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯಕ್ರಮ ನಡೆಯಿತು.

ದೇವಸ್ಥಾನದಲ್ಲಿ ಪ್ರತಿನಿತ್ಯ ಕುಂಕುಮಾರ್ಚನೆ, ಪುಷ್ಪಾರ್ಚನೆ, ಬಿಲ್ವಾರ್ಚನೆ, ನೈವೇದ್ಯ ಅರ್ಪಣೆ ಕಾರ್ಯಗಳು ನಡೆಯುತ್ತಿವೆ. ದೇವಿ ಮೂರ್ತಿಗೆ ವಿವಿಧ ಹೂವಿನ ಅಲಂಕಾರವನ್ನು ಮಾಡಲಾಗುತ್ತಿದೆ. ಸೋಮವಾರ ಶ್ರೀ ಕಾಳಿಕಾ ದೇವಿ ಮೂರ್ತಿಗೆ ವಿಶೇಷವಾಗಿ ಸಿಂಗರಿಸಿ ಪೂಜೆ ಸಲ್ಲಿಸಿ ಬಾಲ ಮಕ್ಕಳ ಮುತ್ತೈದೆಯರಿಗೆ ಉಡಿ ತುಂಬಲಾಯಿತು.

ಈ ಸಂದರ್ಭದಲ್ಲಿ ಮಸ್ಕಿ ಪಟ್ಟಣ ಮತ್ತು ತಾಲೂಕಿನ ವಿಶ್ವಕರ್ಮ ಸಮಾಜದವರು, ಮಹಿಳೆಯರು ಭಾಗವಹಿಸಿದ್ದರು.

# ನವರಾತ್ರಿ ಉತ್ಸವ ಪಲ್ಲಕ್ಕಿ ಮಹೋತ್ಸವ

**ಮುದಗಲ್.ಅ.23** ಪಟ್ಟಣದ ಸಾಲಿಮಠದಲ್ಲಿ ಕಳೆದ 9 ದಿನಗಳಿಂದಲೂ ನವರಾತ್ರಿ ಉತ್ಸವ ಜರುಗಿದ್ದು ನವರಾತ್ರಿ ಕೊನೆ ದಿನ ಬುಧವಾರ ದಂದು ಪಲ್ಲಕ್ಕಿ



ಹಾಗೂ ಮೂತಿ9 ಮೆರವಣಿಗೆ ಜರುಗಿತು.

ಸ್ಥಳೀಯ ಸಾಲಿಮಠದಿಂದ ಪಲ್ಲಕ್ಕಿ ಮೆರವಣಿಗೆಯು ಆರಂಭಗೊಂಡು ಪಟ್ಟಣದ ಕುಂಬಾರ ಓಣಿ ಮುಖ್ಯ ಬಜಾರ್ ರಸ್ತೆ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಸಲಾಯಿತು.

ಮೆರವಣಿಗೆ ಸಾನ್ನಿಧ್ಯವನ್ನು ಸಾಲಿಮಠದ ಸಿದ್ದಯ್ಯಸ್ವಾಮಿ ಹಾಗೂ ಮಗನಾದ ಅಭಿಷೇಕ ಸಾಲಿಮಠ ವಹಿಸಿದ್ದರು.

ಈರಣ್ಣ ಹಡಪದ ಹಾಗೂ ಸಂಗಪ್ಪ ಕೊಡೆಕಲ್ ಪಲ್ಲಕ್ಕಿ ಮೆರವಣಿಗೆ ನೇತೃತ್ವ ವಹಿಸಿದ್ದರು.

ಮೆರವಣಿಗೆಯಲ್ಲಿ ವಿಶೇಷ ಡೊಳ್ಳು ಕುಣಿತ,

# ಈಶಾನ್ಯ ಪದವೀಧರ ಕ್ಷೇತ್ರ: ಲಿಂಗಸುಗೂರಿನಲ್ಲಿ ಶೇ.86.62ರಷ್ಟು ಮತದಾನ



**ಲಿಂಗಸುಗೂರು:** ಕರ್ನಾಟಕ ಈಶಾನ್ಯ ಪದವೀಧರ ಮತಕ್ಷೇತ್ರದ ಚುನಾವಣೆಗೆ ಸಂಬಂಧಿಸಿದಂತೆ 57-ಲಿಂಗಸುಗೂರು ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಗುರುವಾರ ಶಾಂತಿಯುತ ಮತದಾನ ನಡೆಯಿತು. ಸಂಜೆ 4 ಗಂಟೆಯ ವೇಳೆಗೆ ಲಿಂಗಸುಗೂರು, ಹಟ್ಟಿ ಕ್ಯಾಂಪ್ ಮತ್ತು ಮುದುಗಲ್‌ನ ಮೂರು ಮತಗಟ್ಟೆಗಳಲ್ಲಿ ಒಟ್ಟಾರೆ ಶೇ.86.62ರಷ್ಟು ಮತದಾನ ದಾಖಲಾಗಿದೆ.

ಮತದಾನದ ಹಿನ್ನೆಲೆಯಲ್ಲಿ ವಿವಿಧ ರಾಜಕೀಯ ಪಕ್ಷಗಳ ಮುಖಂಡರು ಮತಗಟ್ಟೆಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಮಾಜಿ ಶಾಸಕ ಡಿ.ಎಸ್. ಹೂಲಗೇರಿ ಸೇರಿದಂತೆ ಕಾಂಗ್ರೆಸ್ ಪಕ್ಷದ ಮುಖಂಡರು ಹಾಗೂ ಪದಾಧಿಕಾರಿಗಳು ಮತಗಟ್ಟೆಗಳಿಗೆ ತೆರಳಿ ಮತದಾರರ ಪಟ್ಟಿ, ಮತದಾನದ ವ್ಯವಸ್ಥೆ ಮತ್ತು ಮತದಾನದ ಪ್ರಗತಿ ಕುರಿತು ಮಾಹಿತಿ ಪಡೆದುಕೊಂಡರು.

ಮತದಾನದ ವಿವರ ಹೀಗಿದೆ:

ಮೂರು ಮತಗಟ್ಟೆಗಳಲ್ಲಿ ಒಟ್ಟು 905 ಮತದಾರರಿದ್ದು, ಈ ಪೈಕಿ 784 ಮಂದಿ ಮತ ಚಲಾಯಿಸಿದ್ದಾರೆ. ಇವರಲ್ಲಿ 502 ಪುರುಷರು ಹಾಗೂ 282 ಮಹಿಳೆಯರು ಸೇರಿದ್ದಾರೆ.

ಹಟ್ಟಿ ಕ್ಯಾಂಪ್‌ನ ಸರ್ಕಾರಿ ಜೂನಿಯರ್ ಕಾಲೇಜಿನ ಮತಗಟ್ಟೆ ಸಂಖ್ಯೆ 132ರಲ್ಲಿ 236 ಮತದಾರರ ಪೈಕಿ 189 ಮಂದಿ (ಶೇ.80.08) ಮತದಾನ ಮಾಡಿದ್ದಾರೆ. ಲಿಂಗಸುಗೂರಿನ ಹಳೆಯ ತಹಶೀಲ್ದಾರ್ ಕಚೇರಿಯ ಮತಗಟ್ಟೆ ಸಂಖ್ಯೆ 133ರಲ್ಲಿ 462 ಮತದಾರರ ಪೈಕಿ 408 ಮಂದಿ (ಶೇ.88.31) ಮತ ಚಲಾಯಿಸಿದ್ದಾರೆ. ಮುದುಗಲ್ ಪುರಸಭೆ ಕಚೇರಿ ಕಟ್ಟಡದ ಮತಗಟ್ಟೆ ಸಂಖ್ಯೆ 135ರಲ್ಲಿ 207 ಮತದಾರರ ಪೈಕಿ 187 ಮಂದಿ (ಶೇ.90.34) ತಮ್ಮ ಹಕ್ಕು ಚಲಾಯಿಸಿದ್ದಾರೆ.

ಅತಿ ಹೆಚ್ಚು ಮತಗಳು ಲಿಂಗಸುಗೂರು ಮತಗಟ್ಟೆಯಲ್ಲಿ (408) ಚಲಾವಣೆಯಾಗಿದ್ದರೆ, ಶೇಕಡಾವಾರು ಪ್ರಮಾಣದಲ್ಲಿ ಮುದುಗಲ್ ಮತಗಟ್ಟೆ (ಶೇ.90.34) ಮೊದಲ ಸ್ಥಾನದಲ್ಲಿದೆ.

ಮ'ಂತ'ಗ'ಟ್ಟ'ಗ'ಳ'ಲ್ಲಿ ಕೈಗೊಳ್ಳಲಾಗಿದ್ದ ವ್ಯವಸ್ಥೆಗಳ ಬಗ್ಗೆ ಮುಖಂಡರು ತೃಪ್ತಿ ವ್ಯಕ್ತಪಡಿಸಿದರು.

# ಶಿಕ್ಷಕರ ಕ್ಷೇತ್ರದ ವಿಧಾನ ಪರಿಷತ್ತಿನ ಚುನಾವಣೆ ಕಾಂಗ್ರೆಸ್ ಅಭ್ಯರ್ಥಿ ಶರಣಪ್ಪ ಮಟ್ಟೂರ್ ಗೆಲುವು ಖಚಿತ: ಅಮ್ಜದ್ ಪಟೇಲ್ ವಿಶ್ವಾಸ



**ಕೊಪ್ಪಳ:** ಕಲ್ಯಾಣ ಕರ್ನಾಟಕ ಕಲಬುರ್ಗಿ ಈಶಾನ್ಯ ವಲಯ ಶಿಕ್ಷಕರ ಕ್ಷೇತ್ರದ ವಿಧಾನ ಪರಿಷತ್ತಿನ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಯಾಗಿ ಸ್ಪರ್ಧಿಸಿರುವ ಶರಣಪ್ಪ ಮಟ್ಟೂರು ರವರು ಗೆಲವು ಸಾಧಿಸಲಿದ್ದಾರೆ ಎಂದು ಕೊಪ್ಪಳ ನಗರಸಭೆಯ ಮಾಜಿ ಅಧ್ಯಕ್ಷ ಹಾಗೂ ಕಾಂಗ್ರೆಸ್ ಮುಖಂಡ ಅಮ್ಜದ್ ಪಟೇಲ್ ದೃಢ ವಿಶ್ವಾಸ ವ್ಯಕ್ತಪಡಿಸಿ ಹೇಳಿಕೆ ನೀಡಿದ್ದಾರೆ,

ಅವರು ಶುಕ್ರವಾರ ಶಿಕ್ಷಕರ ಕ್ಷೇತ್ರದ ವಿಧಾನ ಪರಿಷತ್ತಿನ ಚುನಾವಣೆ ಯ ಮತದಾನ ಪೂರ್ಣಗೊಂಡ ಬಳಿಕ ಮಾತನಾಡಿ ತಮ್ಮ ಪ್ರತಿಕ್ರಿಯೆ ನೀಡಿ ಸದರಿ ಚುನಾವಣೆಯಲ್ಲಿ ನಮ್ಮ ಕಾಂಗ್ರೆಸ್ ಅಭ್ಯರ್ಥಿಗೆ ಮತದಾರರು ಹೆಚ್ಚಿನ ರೀತಿಯಲ್ಲಿ ಮತದಾನ ಮಾಡಿದ್ದಾರೆ ಮತದಾರರ ಒಲವು ಕಾಂಗ್ರೆಸ್ ಕಡೆಗೆ ಹೆಚ್ಚಾಗಿ ಕಂಡು ಬಂದಿರುವುದರಿಂದ ಈ ಬಾರಿ ಇಲ್ಲಿ ಕಾಂಗ್ರೆಸ್ ಅಭ್ಯರ್ಥಿ ಗೆಲುವು ಸಾಧಿಸುವಲ್ಲಿ ಯಾವುದೇ ಸಂದೇಹವಿಲ್ಲ ಎಂದು ತಿಳಿಸಿದ್ದಾರೆ, ಶರಣಪ್ಪ ಮಟ್ಟೂರು ರವರು ಶಿಕ್ಷಕರ ಸಮಸ್ಯೆಗಳಿಗೆ ಸ್ಪಂದಿಸುವ ಮನೋಭಾವ ಹೊಂದಿದ್ದು ಶಿಕ್ಷಕರ ಹಿತಾಸಕ್ತಿ ಕಾಪಾಡಲು ಭದ್ಧರಾಗಿದ್ದಾರೆ, ಶಿಕ್ಷಕರ ಬೇಡಿಕೆಗಳು ,ಶೈಕ್ಷಣಿಕ ಕ್ಷೇತ್ರದ ಅಭಿವೃದ್ಧಿ ಹಾಗೂ ಶಿಕ್ಷಕರ ಹಕ್ಕುಗಳ ರಕ್ಷಣೆಗೆ ಆದ್ಯತೆ ನೀಡುವ ಅಭ್ಯರ್ಥಿಯನ್ನು ಚುನಾವಣೆಯಲ್ಲಿ ಶಿಕ್ಷಕ ಮ'ಂತ'ದ'ಾ'ರ'ರ'ು ಬೆಂಬಲಿಸಿರುವುದರಿಂದ ನಮ್ಮ ಕಾಂಗ್ರೆಸ್ ಅಭ್ಯರ್ಥಿ ಶರಣಪ್ಪ ಮಟ್ಟೂರು ಗೆಲುವು ಸಾಧಿಸುವದು ಬಹುತೇಕ ಖಚಿತವಾಗಿದೆ ಎಂದರು ,

ಮುಂದುವರೆದು ಮಾತನಾಡಿ ಕಾಂಗ್ರೆಸ್ ಪಕ್ಷದ ಸಂಘಟಿತ ಪ್ರಯತ್ನ ಅಭ್ಯರ್ಥಿಯ ಪರವಾಗಿ ನಡೆದ ಪ್ರಚಾರ ಹಾಗೂ ಶಿಕ್ಷಕರ ವ್ಯಾಪಕ ಬೆಂಬಲ ಕಾಂಗ್ರೆಸ್ ಅಭ್ಯರ್ಥಿಯನ್ನು ಗೆಲ್ಲಿಸುವ ಸಾಧ್ಯತೆ ಇದೆ , ಸಂಪೂರ್ಣವಾಗಿ ಬೆಂಬಲಿಸುವುದರ ಮೂಲಕ ಗೆಲುವಿಗೆ ಮತದಾರರು ಸಹಕರಿಸಿದ್ದಾರೆ ಎಂಬುದು ಮೇಲ್ನೋಟಕ್ಕೆ ತಿಳಿದು ಬಂದಿರುವ ಹಿನ್ನೆಲೆಯಲ್ಲಿ ಬಹುತೇಕ ಸದರಿ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಶರಣಪ್ಪ ಮಟ್ಟೂರ ರವರು ಗೆಲವು ಸಾಧಿಸಲಿದ್ದಾರೆ ಮತದಾನ ಸಂದರ್ಭದಲ್ಲಿ ನಮ್ಮ ಕೊಪ್ಪಳ ಜಿಲ್ಲೆಯಲ್ಲಿ ಕೂಡ ವ್ಯಾಪಕ ಬೆಂಬಲ ವ್ಯಕ್ತವಾಗಿದ್ದು ಕೊಪ್ಪಳದಲ್ಲಿ ಕೂಡ ಶಾಸಕ ಕೆ ರಾಘವೇಂದ್ರ ಹಿಟ್ನಾಳ ರವರ ನೇತೃತ್ವದಲ್ಲಿ ಎಲ್ಲಾ ಮುಖಂಡರು ಸೇರಿ ಮತದಾನದ ಪ್ರಕ್ರಿಯೆ ಯಲ್ಲಿ ಪಾಲ್ಗೊಂಡು ಅಭ್ಯರ್ಥಿ ಪರ ಒಗ್ಗೂಡಿ ಶ್ರಮಿಸಿದ್ದಾರೆ ಇಲ್ಲಿ ಕಾಂಗ್ರೆಸ್ ಅಭ್ಯರ್ಥಿ ಗೆಲುವು ಸಾಧಿಸಲಿದೆ ಎಂದು ಕೊಪ್ಪಳ ನಗರಸಭೆಯ ಮಾಜಿ ಅಧ್ಯಕ್ಷ ಹಾಗೂ ಕಾಂಗ್ರೆಸ್ ಮುಖಂಡ ಅಮ್ಜದ್ ಪಟೇಲ್ ತಮ್ಮ ದೃಢ ವಿಶ್ವಾಸ ವ್ಯಕ್ತಪಡಿಸಿದ್ದಾರೆ,

# ನವೋದಯ ಶಿಕ್ಷಣ ಸಂಸ್ಥೆ-ರಾಯಚೂರು IIIT ನಡುವೆ ಸಂಶೋಧನೆಗೆ ಐತಿಹಾಸಿಕ ಒಡಂಬಡಿಕೆ



**ರಾಯಚೂರು:**ಮುಂದಿನ ತಲೆಮಾರಿಗೆ ಶೈಕ್ಷಣಿಕ ಸಂಶೋಧನೆಯ ಪ್ರಗತಿ ಮತ್ತು ಆರೋಗ್ಯ, ಆಹಾರ, ಪರಿಸರ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಜಂಟಿ ಕೆಲಸದ ಉದ್ದೇಶದಿಂದ ನವೋದಯ ಶಿಕ್ಷಣ ಸಂಸ್ಥೆ ಹಾಗೂ ರಾಯಚೂರಿನ ಭಾರತೀಯ ಮಾಹಿತಿ ತಂತ್ರಜ್ಞಾನ ಸಂಸ್ಥೆ (IIIT) ನಡುವೆ ಸಂಶೋಧನೆಗಾಗಿ ತಿಳುವಳಿಕೆ ಒಪ್ಪಂದಕ್ಕೆ ಸಹಿ ಹಾಕಲಾಯಿತು.

ನವೋದಯ ಶಿಕ್ಷಣ ಸಂಸ್ಥೆಯಲ್ಲಿ ಹಮ್ಮಿಕೊಂಡಿದ್ದ ಒಡಂಬಡಿಕೆ ಕಾರ್ಯಕ್ರಮದಲ್ಲಿ ಮಾತನಾಡಿದ ಸಂಸ್ಥೆಯ ನಿರ್ದೇಶಕ ಡಾ. ಹರೀಶ ಕುಮಾರ ಸರದಾನ, ಈ ಭಾಗದ ಸಮಗ್ರ ಅಭಿವೃದ್ಧಿ ದೃಷ್ಟಿಯಿಂದ ಐತಿಹಾಸಿಕ ಒಪ್ಪಂದ ಮಾಡಿಕೊಳ್ಳಲಾಗಿದೆ. ಇದರಿಂದ ಧನಾತ್ಮಕ ಪರಿಣಾಮ ಬೀರಿ ಅಭಿವೃದ್ಧಿ ಪರ್ವ ಆರಂಭವಾಗಲಿದೆ ಎಂದು ಆಶಯ ವ್ಯಕ್ತಪಡಿಸಿದರು.

ವಿಶೇಷ ಆಹ್ವಾನಿತರಾಗಿ ಆಗಮಿಸಿದ್ದ ಬೆಳಗಾವಿಯ ಭಾರತೀಯ ವೈದ್ಯಕೀಯ ಸಂಶೋಧನಾ ಮಂಡಳಿ (ICMR) ನಿರ್ದೇಶಕ ಡಾ. ಮನೀಶ ಬರವಾಲಿಯಾ ಮಾತನಾಡಿ, ನಾಳೆಯ ಒಳಿತಿಗಾಗಿ ಇಂದು ಒಳ್ಳೆಯ ನಿರ್ಧಾರ ಮಾಡಬೇಕಿದೆ. ಇದರಿಂದ ಆರೋಗ್ಯ ಮತ್ತು ಇತರ ಸಮಸ್ಯೆಗಳಿಗೆ ಪರಿಹಾರ ಸಿಗಲಿದೆ. ನವೋದಯ ಸಂಸ್ಥೆ ಹಲವು ಮೈಲುಗಲ್ಲು ದಾಟಿದೆ, ಈ ಭಾಗದ ಸಮಸ್ಯೆಗಳಿಗೆ ಜೊತೆಯಾಗಿ ಸಹಕರಿಸಲು ಐಇಖ್ಕ ಸದಾ ಸಿದ್ಧವಿದೆ.ನವೋದಯ ಶಿಕ್ಷಣ ಸಂಸ್ಥೆಯಡಿ ಹಲವು ವಿಭಾಗಗಳಿದ್ದು ಸಂಶೋಧನೆಯಲ್ಲಿ ವಿಫುಲ ಅವಕಾಶಗಳಿದ್ದು, ಸಂಶೋಧಕರು ಮತ್ತು ಸಾರ್ವಜನಿಕರು ಪ್ರಯೋಜನ ಪಡೆಯುವಂತೆ ಕರೆ ನೀಡಿದರು.

ಕುಲಸಚಿವ ಡಾ. ಟಿ. ಶ್ರೀನಿವಾಸ ಮಾತನಾಡಿ,

# ವಿದ್ಯುತ್ ಅವಘಡ: ಮೂರು ಕುರಿಗಳು ಬಲಿ ಮಾಲೀಕರಿಗೆ ಪರಿಹಾರಕ್ಕೆ ಆಗ್ರಹ



**ಲಿಂಗಸುಗೂರು:** ಪಟ್ಟಣದ ರಾಯಚೂರು ರಸ್ತೆಯ ಭಗೀರಥ ಲೇಔಟ್‌ನಲ್ಲಿರುವ ಟೆಕ್ನೋ ಸ್ಕೂಲ್ ಪಕ್ಕದ ಶ್ರೀ ವೆಂಕಟೇಶ್ವರ ದೇವಸ್ಥಾನದ ಹಿಂಭಾಗದಲ್ಲಿ ಬುಧವಾರ ಸಂಜೆ ಸಂಭವಿಸಿದ ವಿದ್ಯುತ್ ಅವಘಡದಲ್ಲಿ ಮೂರು ಕುರಿಗಳು ಮೃತಪಟ್ಟಿವೆ.

ಕಸಬ ಲಿಂಗಸುಗೂರು ನಿವಾಸಿ ರಮೇಶ್ ತಂದೆ ಕುಪ್ಪಣ್ಣ ಕುರುಬ ಅವರಿಗೆ ಸೇರಿದ ಕುರಿಗಳು ಮೃತಪಟ್ಟಿದ್ದು, ಸುಮಾರು ಸಂಜೆ 4 ಗಂಟೆ ವೇಳೆಗೆ ಮಳೆಯ ತೇವಾಂಶದ ಹಿನ್ನೆಲೆಯಲ್ಲಿ ವಿದ್ಯುತ್ ಕಂಬದ ಅರ್ಥಿಂಗ್ ವೈರ್‌ನಿಂದ ವಿದ್ಯುತ್ ಪ್ರವಹಿಸಿ ಅವಘಡ ಸಂಭವಿಸಿದೆ ಎಂದು ಸ್ಥಳೀಯರು ತಿಳಿಸಿದ್ದಾರೆ.

ಘಟನೆಯ ನಿಖರ ಕಾರಣ ತಿಳಿಯಲು ವಿದ್ಯುತ್ ಇಲಾಖೆಯ ಅಧಿಕಾರಿಗಳು ತಾಂತ್ರಿಕ ಪರಿಶೀಲನೆ ನಡೆಸಬೇಕಿದೆ. ಪಟ್ಟಣದ ಕೆಲವೆಡೆ 11 ಕೆ.ವಿ. ಮಾರ್ಗ ಸೇರಿದಂತೆ ವಿದ್ಯುತ್ ತಂತಿಗಳು ಕೆಳಮಟ್ಟದಲ್ಲಿ ಜೋತು ಬಿದ್ದಿದ್ದು,

ಕಂಬಗಳು ಮತ್ತು ಅರ್ಥಿಂಗ್ ವ್ಯವಸ್ಥೆಯ ನಿರ್ವಹಣೆಯಲ್ಲಿ ಲೋಪವಿದೆ ಎಂದು ಸಾರ್ವಜನಿಕರು ಆರೋಪಿಸಿದ್ದಾರೆ.

ಮಳೆಗಾಲದಲ್ಲಿ ವಿದ್ಯುತ್ ಮಾರ್ಗಗಳ ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡಬೇಕು. ಇಲ್ಲದಿದ್ದರೆ ಸಾರ್ವಜನಿಕರು ಮತ್ತು ಜಾನುವಾರುಗಳಿಗೆ ಅಪಾಯ ತಪ್ಪಿದ್ದಲ್ಲ ಎಂದು ಸ್ಥಳೀಯರು ಆತಂಕ ವ್ಯಕ್ತಪಡಿಸಿದ್ದಾರೆ.

ಅವಘಡಕ್ಕೆ ಕಾರಣ ಪತ್ತೆಹಚ್ಚಿ, ಇಲಾಖೆಯ ಲೋಪ ಕಂಡುಬಂದರೆ ಹೊಣೆಗಾರರ ವಿರುದ್ಧ ಕ್ರಮ ಕೈಗೊಳ್ಳಬೇಕು ಮತ್ತು ಮೃತ ಕುರಿಗಳ ಮಾಲೀಕರಿಗೆ ಸೂಕ್ತ ಪರಿಹಾರ ನೀಡಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

# ಕಲಾವಿದರನ್ನು ಗೌರವಿಸುವುದು ನಮ್ಮ ಸಂಸ್ಕೃತಿಯ ಹೆಮ್ಮೆ: ರಾಜಾ ಗುರುರಾಜ ನಾಯಕ



**ಲಿಂಗಸುಗೂರು:** ಹಟ್ಟಿ ಚಿನ್ನದಗಣಿ ಸಮೀಪದ ಗೌಡೂರ ನೆಲಮೂಲದ ಕಲೆ, ಸಂಸ್ಕೃತಿ ಮತ್ತು ಕಲಾವಿದರನ್ನು ಗೌರವಿಸುವುದು ನಮ್ಮ ಸಂಸ್ಕೃತಿಯ ನಿಜವಾದ ಹೆಮ್ಮೆಯಾಗಿದೆ ಎಂದು ಗ್ರಾಮದ ಸಂಸ್ಥಾನಿಕರಾದ ರಾಜಾ ಗುರುರಾಜ ನಾಯಕ ಹೇಳಿದರು.

ಸಮೀಪದ ಐತಿಹಾಸಿಕ ಹಾಗೂ ಪ್ರಾಗೈತಿಹಾಸಿಕ ಪ್ರಸಿದ್ಧಿಯ ಗೌಡೂರು ಗ್ರಾಮದ ಶ್ರೀ ದಂಡಿನ ದುರ್ಗಾದೇವಿ ದೇವಸ್ಥಾನದಲ್ಲಿ ಶರನ್ನವರಾತ್ರಿ ಮಹೋತ್ಸವದ ನಿಮಿತ್ತ ಸತತ 9 ದಿನಗಳ ಕಾಲ ಜರುಗಿದ ಪ್ರಥಮ ವರ್ಷದ 'ಶ್ರೀದೇವಿ ಮಹಾತ್ಮೆ' ಪುರಾಣ ಪ್ರವಚನ, ಭಜನಾ ಸಂಗೀತ ಹಾಗೂ ಸನ್ಮಾನ ಸಮಾರಂಭದ ಮಂಗಳ ಮಹೋತ್ಸವದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ದೇವಸ್ಥಾನ ಸೇವಾ ಸಮಿತಿ ಹಾಗೂ ಗ್ರಾಮಸ್ಥರ ವತಿಯಿಂದ ಆಯೋಜಿಸಿದ್ದ ಈ ಕಾರ್ಯಕ್ರಮದಲ್ಲಿ ಸಾಧಕರು ಮತ್ತು ಕಲಾವಿದರನ್ನು ಸನ್ಮಾನಿಸಿ ಗೌರವಿಸಿರುವುದು ನೆಲಮೂಲದ ಭಜನಾ ಸಂಸ್ಕೃತಿಯ ಹಿರಿಮೆಯನ್ನು ಮತ್ತಷ್ಟು ಹೆಚ್ಚಿಸಿದೆ ಎಂದು ಹರ್ಷ ವ್ಯಕ್ತಪಡಿಸಿದರು.

ಸಮಾರಂಭದಲ್ಲಿ ಭಕ್ತರಿಗೆ ಆಧ್ಯಾತ್ಮಿಕ ಚಿಂತನೆಗಳನ್ನು ಉಣಬಡಿಸಿದ ಪ್ರವಚನಕಾರ ವೇ.ಮೂ. ರಾಮಲಿಂಗಯ್ಯ ಸ್ವಾಮಿ ಅವರಿಗೆ ಕೀರ್ತನ ರತ್ನ ಬಿರುದು ನೀಡಿ ಗೌರವಿಸಲಾಯಿತು. ಭಜನಾ ಸಂಗೀತದಲ್ಲಿ ಅದ್ವಿತೀಯ ಹಾಡುಗಾರಿಕೆ ಹಾಗೂ ಲಯಬದ್ಧ ಡೋಲಕ್ ವಾದನದಿಂದ ಜನಮನ ಸೂರೆಗೊಂಡ ಸುರಗುಂದದ ಕಲಾವಿದ ಶಂಕರ್ ಗಣೇಶ ಅವರಿಗೆ ಭಜನೆ ಭಾಸ್ಕರ ಬಿರುದು ನೀಡಿ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ರಾಜಾ ಸೇತುರಾಮ ನಾಯಕ, ರಾಜಾಮೂರ್ತಿ ನಾಯಕ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ನಿಕಟಪೂರ್ವ ಅಧ್ಯಕ್ಷರಾದ ಗುರುರಾಜ ಗೌಡೂರ, ಲಕ್ಷ್ಮಣ ನಾಯಕ,ವೀರನಗೌಡ ಪಾಟೀಲ್, ಅರ್ಚಕ ನರಸಪ್ಪ ಸುಂದಿ, ವೇ.ಮೂ. ರಾಚಯ್ಯ ಸ್ವಾಮಿ ಗಣಾಚಾರಿ, ಶರಣಪ್ಪ ಕೊಲ್ಲೂರು, ಶಂಕರ್ ಗಣೇಶ ಗಾರಲದಿನ್ನಿ, ಈರಪ್ಪ ಮಾಸ್ತಾರ್ ಬಾಗೂರು, ಅಮರಗುಂಡ ಉದ್ದಾರ, ಯಲ್ಲಪ್ಪ ಮಾನ್ವಿ, ರಮೇಶ ಅಗಸಿಮನಿ, ಪತ್ರಕರ್ತ ಗವಿಸಿದ್ದಪ್ಪ ಎಸ್. ಭಜಂತ್ರಿ, ಅಮರಗುಂಡ ಸಂಗಟಿ, ಮೈನು ಸೈಯದ್ ಸೇರಿದಂತೆ ಗ್ರಾಮದ ಗಣ್ಯರು ಹಾಗೂ ನೂರಾರು ಭಕ್ತಾದಿಗಳು ಉಪಸ್ಥಿತರಿದ್ದರು.

## ವೈದ್ಯಕೀಯ ಮತ್ತು ಸಹಕಾರ ಕ್ಷೇತ್ರದ ಪ್ರಮುಖ ಕೊಂಡಿ ಕಳಚಿತು

# ಗ್ರಾಮೀಣ ಜನರ ಆರೋಗ್ಯ ಸೇವೆಗೆ ಮುಡಿಪಾಗಿದ್ದ ಡಾ.ಶಿವಶರಣಪ್ಪ ಇತ್ತಿ

**ಮಸ್ಕಿ :** ಗ್ರಾಮೀಣ ವೈದ್ಯಕೀಯ ಸೇವೆ,ಸಹಕಾರ ಕ್ಷೇತ್ರದ ಅಭಿವೃದ್ಧಿ ಹಾಗೂ ಸಮಾಜಮುಖಿ ಕಾರ್ಯಗಳ ಮೂಲಕ ಮಸ್ಕಿ ತಾಲೂಕು ಸೇರಿದಂತೆ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಗುರುತಿಸಿಕೊಂಡಿದ್ದ ಹಿರಿಯ ವೈದ್ಯರು ಹಾಗೂ ಸಹಕಾರ ಕ್ಷೇತ್ರದ ನಾಯಕ ಡಾ.ಶಿವಶರಣಪ್ಪ ಇತ್ತಿ ಅವರ ನಿಧನದಿಂದ ಈ ಭಾಗದ ವೈದ್ಯಕೀಯ ಮತ್ತು ಸಹಕಾರ ಕ್ಷೇತ್ರಕ್ಕೆ ನಷ್ಟ ಉಂಟಾಗಿದೆ.



**ಗ್ರಾಮೀಣ ಆರೋಗ್ಯ ಸೇವೆಗೆ ಆದ್ಯತೆ**

ಗ್ರಾಮೀಣ ಪ್ರದೇಶಗಳಲ್ಲಿ ವೈದ್ಯಕೀಯ ಸೌಲಭ್ಯಗಳು ಸೀಮಿತವಾಗಿದ್ದ ಕಾಲದಲ್ಲಿ ಸೈಕಲ್,ಬಂಡಿ ಹಾಗೂ ಮೋಟಾರ್ ಸೈಕಲ್‌ಗಳ ಮೂಲಕ ಗ್ರಾಮಗಳಿಗೆ ತೆರಳಿ ಬಡವರು ಮತ್ತು ನಿರ್ಗತಿಕರಿಗೆ ಉಚಿತವಾಗಿ ಅಥವಾ ಕಡಿಮೆ ವೆಚ್ಚದಲ್ಲಿ ಚಿಕಿತ್ಸೆ ನೀಡುತ್ತಿದ್ದರು. ಕಣ್ಣಿನ ತಪಾಸಣೆ,ಹೃದಯರೋಗ ಮತ್ತು ಮಧುಮೇಹ ತಪಾಸಣಾ ಶಿಬಿರಗಳ ಆಯೋಜನೆಯ ಮೂಲಕ ಆರೋಗ್ಯ ಸೇವೆಯನ್ನು ಜನಸಾಮಾನ್ಯರಿಗೆ ತಲುಪಿಸಲು ಶ್ರಮಿಸಿದ್ದರು.

**ಸಹಕಾರ ಕ್ಷೇತ್ರದಲ್ಲಿ ನಾಯಕತ್ವ**

ಮಸ್ಕಿಯ ಶ್ರೀ ಭ್ರಮರಾಂಬ ಪತ್ತಿನ ಸೌಹಾರ್ದ ಸಹಕಾರಿ ಸಂಘ ನಿಯಮಿತದ ಅಧ್ಯಕ್ಷರಾಗಿ ಕಾರ್ಯನಿರ್ವಹಿಸಿದ್ದ ಅವರು,ಸಂಸ್ಥೆಯ ಬೆಳವಣಿಗೆ,ಶಾಖೆಗಳ ವಿಸ್ತರಣೆ ಹಾಗೂ ಗ್ರಾಹಕರಿಗೆ ಹಣಕಾಸಿನ ಸೇವೆ ಒದಗಿಸುವ ಕಾರ್ಯದಲ್ಲಿ ಕೊಡುಗೆ ನೀಡಿದ್ದರು.ಸಾಮಾನ್ಯ ಜನರು,ಸಣ್ಣ ವ್ಯಾಪಾರಿಗಳು ಮತ್ತು ಆರ್ಥಿಕವಾಗಿ ಹಿಂದುಳಿದ ಕುಟುಂಬಗಳ ಪ್ರಗತಿಗೆ ಸಹಕಾರ ಸಂಸ್ಥೆಗಳು ನೆರವಾಗಬೇಕು ಎಂಬ ಆಶಯ ಹೊಂದಿದ್ದರು.ಸಹಕಾರ ಕ್ಷೇತ್ರದಲ್ಲಿ ಸಲ್ಲಿಸಿದ ಸೇವೆಯನ್ನು ಗುರುತಿಸಿ ಕರ್ನಾಟಕ ಸರ್ಕಾರವು ಅವರಿಗೆ ಪ್ರತಿಷ್ಠಿತ ಸಹಕಾರ ರತ್ನ' ಪ್ರಶಸ್ತಿ ನೀಡಿ ಗೌರವಿಸಿತ್ತು.

**ಮಹಿಳಾ ಸಬಲೀಕರಣ ಮತ್ತು ಕ್ರೀಡಾ ಪ್ರೋತ್ಸಾಹ**

ಮಹಿಳಾ ಸ್ವಸಹಾಯ ಗುಂಪುಗಳ ರಚನೆ ಹಾಗೂ ಅವುಗಳ ಆರ್ಥಿಕ ಚಟುವಟಿಕೆಗಳಿಗೆ ಪ್ರೋತ್ಸಾಹ ನೀಡುವ ಮೂಲಕ ಮಹಿಳೆಯರ ಸ್ವಾವಲಂಬನೆಗೆ ಬೆಂಬಲಿಸಿದ್ದರು.ಲಯನ್ಸ್ ಕ್ಲಬ್ ಹಾಗೂ ವಿವಿಧ ಕ್ರೀಡಾ ಸಂಸ್ಥೆಗಳ ಮೂಲಕ ಟೆನಿಸ್ ಕೋರ್ಟ್‌ಗಳು,ಕ್ರೀಡಾಂಗಣಗಳ ನಿರ್ಮಾಣ ಮತ್ತು ಕ್ರೀಡಾಕೂಟಗಳ ಆಯೋಜನೆಗೆ ಸಹಕರಿಸಿ ಯುವಜನರ ಕ್ರೀಡಾ ಚಟುವಟಿಕೆಗಳ ಬೆಳವಣಿಗೆಗೂ ಕೊಡುಗೆ ನೀಡಿದ್ದರು.

**ಸಮಾಜಮುಖಿ ಕಾರ್ಯಗಳ ಮೂಲಕ ಗುರುತು**

ವೈದ್ಯಕೀಯ ಸೇವೆ,ಸಹಕಾರ ಕ್ಷೇತ್ರದ ನಾಯಕತ್ವ,ದಾನಧರ್ಮ ಹಾಗೂ ಸಾಮಾಜಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿದ್ದ ಡಾ.ಶಿವಶರಣಪ್ಪ ಇತ್ತಿ

# ಯುವಕನ ಕೊಲೆ ಖಂಡನೀಯ, ಆರೋಪಿಗಳಿಗೆ ಕಠಿಣ ಶಿಕ್ಷೆಯಾಗಲಿ: ಎನ್. ವಿನಾಯಕ ರಾವ್



ರಾಯಚೂರು: ನಗರದ ಎಲ್‌ಬಿಎಸ್ ನಗರದಲ್ಲಿ ನರಸಿಂಹ ಎಂಬ ಯುವಕನ ಕೊಲೆ ನಡೆದಿರುವ ಘಟನೆಯನ್ನು ಬಿಜೆಪಿ ಯುವ ಮೋರ್ಚಾ ಜಿಲ್ಲಾಧ್ಯಕ್ಷ ಎನ್. ವಿನಾಯಕ ರಾವ್ ತೀವ್ರವಾಗಿ ಖಂಡಿಸಿದ್ದು, ಪ್ರಕರಣದ ಆರೋಪಿಗಳ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಕ್ಷುಲ್ಲಕ ಕಾರಣ ಹಾಗೂ ದುಷ್ಚಟಗಳ ಹಿನ್ನೆಲೆಯಲ್ಲಿ ಅಮಾಯಕ ಯುವಕನ ಪ್ರಾಣ ಕಳೆದುಕೊಂಡಿರುವುದು ಅತ್ಯಂತ ನೋವಿನ ಸಂಗತಿಯಾಗಿದೆ. ಇಂತಹ ಘಟನೆಗಳು ಸಮಾಜದಲ್ಲಿ ಆತಂಕ ಸೃಷ್ಟಿಸುತ್ತಿದ್ದು, ಸಾರ್ವಜನಿಕರ ಸುರಕ್ಷತೆಯ ದೃಷ್ಟಿಯಿಂದ ಪೊಲೀಸ್ ಇಲಾಖೆ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ಒತ್ತಾಯಿಸಿದ್ದಾರೆ.

ಕೊಲೆ ಪ್ರಕರಣದಲ್ಲಿ ಭಾಗಿಯಾಗಿರುವ ಆರೋಪಿಗಳನ್ನು ಶೀಘ್ರ ಬಂಧಿಸಿ, ಸಮಗ್ರ ತನಿಖೆ ನಡೆಸುವ ಮೂಲಕ ಕಾನೂನಿನಡಿ ಕಠಿಣ ಶಿಕ್ಷೆಯಾಗುವಂತೆ ಕ್ರಮ ವಹಿಸಬೇಕು. ಮೃತ ಯುವಕನ ಕುಟುಂಬಕ್ಕೆ ಸೂಕ್ತ ಪರಿಹಾರ ಒದಗಿಸುವುದರ ಜೊತೆಗೆ ನ್ಯಾಯ ದೊರಕಿಸಿಕೊಡಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಮನವಿ ಮಾಡಿದ್ದಾರೆ.

ರಾಯಚೂರು ನಗರದಲ್ಲಿ ಮಾದಕ ವಸ್ತುಗಳ ಬಳಕೆ, ಮದ್ಯಪಾನ ಹಾಗೂ ಇತರ ದುಶ್ಚಟಗಳಿಗೆ ಕಡಿವಾಣ ಹಾಕುವ ಅಗತ್ಯವಿದೆ. ಯುವಜನತೆ ದುಶ್ಚಟಗಳಿಗೆ ಬಲಿಯಾಗದಂತೆ ಜಾಗೃತಿ ಮೂಡಿಸುವುದರೊಂದಿಗೆ ಮಾದಕ ವಸ್ತುಗಳ ಅಕ್ರಮ ಚಟುವಟಿಕೆಗಳ ವಿರುದ್ಧ ಪೊಲೀಸ್ ಇಲಾಖೆ ವಿಶೇಷ ಕಾರ್ಯಾಚರಣೆ ನಡೆಸಬೇಕು ಎಂದು ಆಗ್ರಹಿಸಿದ್ದಾರೆ.

ಇಂತಹ ಘಟನೆಗಳು ಮರುಕಳಿಸದಂತೆ ಜಿಲ್ಲಾಡಳಿತ ಹಾಗೂ ಪೊಲೀಸ್ ಇಲಾಖೆ ಕಟ್ಟುನಿಟ್ಟಿನ ಕ್ರಮ ಕೈಗೊಂಡು, ನಶಾಮುಕ್ತ ರಾಯಚೂರು ನಿರ್ಮಾಣಕ್ಕೆ ಮುಂದಾಗಬೇಕು. ಸಾರ್ವಜನಿಕರ ಸಹಭಾಗಿತ್ವದೊಂದಿಗೆ ಸುರಕ್ಷಿತ ಹಾಗೂ ಶಾಂತಿಯುತ ಸಮಾಜ ನಿರ್ಮಾಣಕ್ಕೆ ಎಲ್ಲರೂ ಕೈಜೋಡಿಸಬೇಕು ಎಂದು ಎನ್. ವಿನಾಯಕ ರಾವ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಮುದಾಯ ಆರೋಗ್ಯ ಕೇಂದ್ರದಲ್ಲಿ ವಿಶ್ವ ಪೋಲಿಯೊ ದಿನಾಚರಣೆ



ಸಿಂಧನೂರು: ತಾಲೂಕಿನ ತುರ್ವಿಹಾಳ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ರಾಯಚೂರು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ತಾಲೂಕು ಆರೋಗ್ಯ ಅಧಿಕಾರಿಗಳ ಕಾರ್ಯಾಲಯ ಸಿಂಧನೂರು, ತುರ್ವಿಹಾಳ ಸಮುದಾಯ ಆರೋಗ್ಯ ಕೇಂದ್ರ ಹಾಗೂ ಸಿಂಧನೂರಿನ ಸನ್‌ರೈಸ್ ಪ್ಯಾರಾಮೆಡಿಕಲ್ ಕಾಲೇಜಿನ ಸಂಯುಕ್ತ ಆಶ್ರಯದಲ್ಲಿ ವಿಶ್ವ ಪೋಲಿಯೊ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಸಮುದಾಯ ಆರೋಗ್ಯ ಕೇಂದ್ರದ ಅರವಳಿಕೆ ತಜ್ಞೆ ಡಾ. ಕೋನಿಕಾ, ಪ್ರತಿ ವರ್ಷ ಅಕ್ಟೋಬರ್ 24ರಂದು ವಿಶ್ವ ಪೋಲಿಯೊ ದಿನವನ್ನು ಆಚರಿಸಲಾಗುತ್ತದೆ. ಪೋಲಿಯೊ ರೋಗದ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು ಹಾಗೂ ಪೋಲಿಯೊ ಮುಕ್ತ ಜಗತ್ತನ್ನು ನಿರ್ಮಿಸುವ ಸಂಕಲ್ಪವನ್ನು ಬಲಪಡಿಸುವುದು ಈ ದಿನಾಚರಣೆಯ ಪ್ರಮುಖ ಉದ್ದೇಶವಾಗಿದೆ ಎಂದು ತಿಳಿಸಿದರು.

ಪೋಲಿಯೊ ವಿರುದ್ಧ ಮೊದಲ ಪರಿಣಾಮಕಾರಿ ಲಸಿಕೆಯನ್ನು ಅಭಿವೃದ್ಧಿಪಡಿಸಿದ ವಿಜ್ಞಾನಿ ಡಾ. ಜೋನಾಸ್ ಸಾಲ್ಕ್ ಅವರ ಕೊಡುಗೆಯನ್ನು ಸ್ಮರಿಸುವ ಉದ್ದೇಶದಿಂದ ರೋಟರಿ ಇಂಟರ್‌ನ್ಯಾಷನಲ್ ಸಂಸ್ಥೆಯು ವಿಶ್ವ ಪೋಲಿಯೊ ದಿನಾಚರಣೆಯನ್ನು ಆರಂಭಿಸಿತು. ಪೋಲಿಯೊ ವೈರಸ್‌ನಿಂದ ಹರಡುವ ಈ ಸಾಂಕ್ರಾಮಿಕ ಕಾಯಿಲೆಯು ಮುಖ್ಯವಾಗಿ ಐದು ವರ್ಷದೊಳಗಿನ ಮಕ್ಕಳನ್ನು ಬಾಧಿಸುತ್ತದೆ. ನರಮಂಡಲದ ಮೇಲೆ ಪರಿಣಾಮ ಬೀರುವ ಈ ರೋಗವು ಶಾಶ್ವತ ಅಂಗವೈಕಲ್ಯ ಹಾಗೂ ಪಾರ್ಶ್ವವಾಯುವಿಗೆ ಕಾರಣವಾಗಬಹುದು. ಇದಕ್ಕೆ ನಿರ್ದಿಷ್ಟ ಚಿಕಿತ್ಸೆ ಇಲ್ಲದಿರುವುದರಿಂದ ಲಸಿಕೆ ಮೂಲಕ ರೋಗವನ್ನು ತಡೆಗಟ್ಟುವುದು ಅತ್ಯಂತ ಅಗತ್ಯವಾಗಿದೆ ಎಂದು ವಿವರಿಸಿದರು.

ನಂತರ ತುರ್ವಿಹಾಳ ಸಮುದಾಯ ಆರೋಗ್ಯ ಕೇಂದ್ರದ ಆಯುಷ್ ವೈದ್ಯಾಧಿಕಾರಿ ಡಾ. ವಿರೂಪಾಕ್ಷಪ್ಪ ಟಿ. ಮಾತನಾಡಿ, ಒಂದು ಕಾಲದಲ್ಲಿ ಭಾರತದಲ್ಲಿ ಪೋಲಿಯೊ ಪ್ರಕರಣಗಳು ಹೆಚ್ಚಿನ ಸಂಖ್ಯೆಯಲ್ಲಿ ಕಂಡುಬರುತ್ತಿದ್ದವು. ಕೇಂದ್ರ ಸರ್ಕಾರದ ಪಲ್ಸ್ ಪೋಲಿಯೊ ಅಭಿಯಾನ, ಆರೋಗ್ಯ ಇಲಾಖೆಯ ನಿರಂತರ ಪ್ರಯತ್ನ ಹಾಗೂ ಆರೋಗ್ಯ ಕಾರ್ಯಕರ್ತರ ಪರಿಶ್ರಮದಿಂದ ದೇಶದಲ್ಲಿ ಪೋಲಿಯೊ ನಿಯಂತ್ರಣಕ್ಕೆ ಬಂದಿದೆ. 2011ರ ಜನವರಿ ನಂತರ ಭಾರತದಲ್ಲಿ ಸ್ಥಳೀಯವಾಗಿ ಹರಡಿದ ಯಾವುದೇ ಹೊಸ ವೈಲ್ಡ್ ಪೋಲಿಯೊ ಪ್ರಕರಣ ವರದಿಯಾಗಿಲ್ಲ. ಇದರ ಪರಿಣಾಮವಾಗಿ 2014ರ ಮಾರ್ಚ್‌ನಲ್ಲಿ ವಿಶ್ವ ಆರೋಗ್ಯ ಸಂಸ್ಥೆಯು ಭಾರತ ಸೇರಿದಂತೆ ಆಗ್ನೇಯ ಏಷ್ಯಾ ವಲಯವನ್ನು ಪೋಲಿಯೊ ಮುಕ್ತವೆಂದು ಘೋಷಿಸಿತು ಎಂದು ತಿಳಿಸಿದರು.

ವಿಶ್ವದಿಂದ ಪೋಲಿಯೊ ಸಂಪೂರ್ಣ ನಿರ್ಮೂಲನೆಯಾಗುವವರೆಗೆ ಪ್ರತಿಯೊಬ್ಬರೂ ಜಾಗೃತರಾಗಿರಬೇಕು. ಐದು ವರ್ಷದೊಳಗಿನ ಎಲ್ಲ ಮಕ್ಕಳಿಗೂ ನಿಗದಿತ ಸಮಯದಲ್ಲಿ ಪೋಲಿಯೊ ಲಸಿಕೆ ಹಾಕಿಸುವ ಮೂಲಕ ರೋಗ ಹರಡುವುದನ್ನು ತಡೆಯಲು ಪೋಷಕರು ಮತ್ತು ಸಾರ್ವಜನಿಕರು ಆರೋಗ್ಯ ಇಲಾಖೆಯೊಂದಿಗೆ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಬಿಎಚ್‌ಇಒ, ಸಿರಿಲ ಲಾರ್ಜರ್ ಕಾಲೇಜಿನ ಪ್ರಾಂಶುಪಾಲರು, ಪ್ರಾಥಮಿಕ ಆರೋಗ್ಯ ಸಮುದಾಯ ಅಧಿಕಾರಿಗಳಾದ ಭಾಗ್ಯ, ದುರ್ಗಾ, ಶರಣಮ್ಮ, ಆಶಾ ಕಾರ್ಯಕರ್ತೆಯರು, ಸನ್ ರೈಸ್ ಪ್ಯಾರಾಮೆಡಿಕಲ್ ಕಾಲೇಜಿನ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಅನಾಥ ವೃದ್ಧೆಯ ಅಂತ್ಯಸಂಸ್ಕಾರ ನೆರವೇರಿಸಿ ಮಾನವೀಯತೆ ಮೆರೆದ ಭೂತಲದಿನ್ನಿ ಗ್ರಾಮಸ್ಥರು



ಸಿಂಧನೂರು: ಹಲವು ವರ್ಷಗಳಿಂದ ಭೂತಲದಿನ್ನಿ ಗ್ರಾಮದಲ್ಲಿ ಆಶ್ರಯ ಪಡೆದಿದ್ದ ಅನಾಥ ವೃದ್ಧೆ ಸುಶೀಲಮ್ಮ (ಜೋಗಮ್ಮ) (73) ಅವರ ನಿಧನದ ಹಿನ್ನೆಲೆಯಲ್ಲಿ ಗ್ರಾಮಸ್ಥರೆಲ್ಲರೂ ಒಗ್ಗೂಡಿ ಧಾರ್ಮಿಕ ವಿಧಿವಿಧಾನಗಳೊಂದಿಗೆ ಅಂತ್ಯಸಂಸ್ಕಾರ ನೆರವೇರಿಸುವ ಮೂಲಕ ಮಾನವೀಯತೆ ಮೆರೆದಿದ್ದಾರೆ.

ಸುಶೀಲಮ್ಮ ಅವರು ಹಲವು ವರ್ಷಗಳಿಂದ ಭೂತಲದಿನ್ನಿ ಗ್ರಾಮದಲ್ಲಿ ವಾಸವಾಗಿದ್ದು, ಗ್ರಾಮದ ಜನರು ಅವರನ್ನು ತಮ್ಮ ಕುಟುಂಬದ ಸದಸ್ಯೆಯಂತೆ ನೋಡಿಕೊಳ್ಳುತ್ತಿದ್ದರು. ಊರಿನ ಹಿರಿಯರು, ಮಹಿಳೆಯರು ಹಾಗೂ ಯುವಕರು ಅವರಿಗೆ ಅಗತ್ಯ ಸಹಾಯ, ಸಹಕಾರ ನೀಡುತ್ತಿದ್ದರು. ಕೆಲ ತಿಂಗಳ ಹಿಂದೆ ಗ್ರಾಮಸ್ಥರ ಸಹಕಾರದೊಂದಿಗೆ ಸಿಂಧನೂರು ನಗರದ ಒಳಬಳ್ಳಾರಿ ರಸ್ತೆಯಲ್ಲಿರುವ ಕರ್ನಾಟಕ ಸರ್ಕಾರದ ರಾಜ್ಯ ಪ್ರಶಸ್ತಿ ಪುರಸ್ಕೃತ ಸಂಸ್ಥೆಯಾದ ಶ್ರೀಮಠ ಸೇವಾ ಟ್ರಸ್ಟ್ (ರಿ.) ಹರೇಟನೂರು ವತಿಯಿಂದ ನಡೆಸಲಾಗುತ್ತಿರುವ ಕಾರುಣ್ಯ ನೆಲೆ ವೃದ್ಧಾಶ್ರಮ ಹಾಗೂ ಬುದ್ಧಿಮಾಂದ್ಯ ಆಶ್ರಮದಲ್ಲಿ ಆಶ್ರಯ ಕಲ್ಪಿಸಲಾಗಿತ್ತು.

ಆದರೆ, ಇತ್ತೀಚೆಗೆ ಆರೋಗ್ಯದಲ್ಲಿ ಏರುಪೇರಾಗಿ ಅನಾರೋಗ್ಯದಿಂದ ಸುಶೀಲಮ್ಮ ಅವರು ಆಶ್ರಮದಲ್ಲಿಯೇ ನಿಧನರಾದರು. ಈ ವಿಷಯ ತಿಳಿದ ಭೂತಲದಿನ್ನಿ ಗ್ರಾಮಸ್ಥರು ಆಶ್ರಮಕ್ಕೆ ಆಗಮಿಸಿ, ಅಗತ್ಯ ಪೂಜಾ ವಿಧಿವಿಧಾನಗಳನ್ನು ನೆರವೇರಿಸಿದ ಬಳಿಕ ಗ್ರಾಮಸ್ಥರ ಸಮ್ಮುಖದಲ್ಲಿ ಗೌರವಪೂರ್ವಕವಾಗಿ ಅಂತ್ಯಸಂಸ್ಕಾರ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಆಶ್ರಮದ ಕಾರ್ಯಾಧ್ಯಕ್ಷ ಡಾ. ಚನ್ನಬಸವಸ್ವಾಮಿ ಹಿರೇಮಠ, ಸುಶೀಲಮ್ಮ ಅವರು ಕಾರುಣ್ಯ ಕುಟುಂಬದ ಸದಸ್ಯೆಯಾಗಿ ನಮ್ಮೊಂದಿಗೆ ಕಳೆದ ದಿನಗಳನ್ನು ಮರೆಯಲು ಸಾಧ್ಯವಿಲ್ಲ. ಹಲವು ವರ್ಷಗಳಿಂದ ಭೂತಲದಿನ್ನಿ ಗ್ರಾಮಸ್ಥರು ಅವರನ್ನು ಸ್ವಂತ ತಾಯಿಯಂತೆ ಪ್ರೀತಿ, ಕಾಳಜಿಯಿಂದ ನೋಡಿಕೊಂಡಿದ್ದಾರೆ. ಅವರ ಸೇವಾ ಮನೋಭಾವ ಹಾಗೂ ಮಾನವೀಯ ಗುಣಗಳು ಎಲ್ಲರಿಗೂ ಮಾದರಿಯಾಗಿವೆ ಎಂದು ಹೇಳಿದರು.

ಸುಶೀಲಮ್ಮ ಅವರ ಅಂತ್ಯಸಂಸ್ಕಾರದಲ್ಲಿ ಗ್ರಾಮದ ಹಿರಿಯರು, ಮಹಿಳೆಯರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಂಬನಿ ಮಿಡಿದಿರುವುದು ಅವರ ಮೇಲಿದ್ದ ಪ್ರೀತಿ ಮತ್ತು ಗೌರವಕ್ಕೆ ಸಾಕ್ಷಿಯಾಗಿದೆ. ಗ್ರಾಮಸ್ಥರ ಹೃದಯದಲ್ಲಿ ಸುಶೀಲಮ್ಮ ಅವರು ವಿಶೇಷ ಸ್ಥಾನ ಪಡೆದಿದ್ದರು. ಅವರ ಆತ್ಮಕ್ಕೆ ಶಾಂತಿ ದೊರೆಯಲಿ ಹಾಗೂ ಅವರ ಅಗಲಿಕೆಯ ದುಃಖವನ್ನು ಸಹಿಸುವ ಶಕ್ತಿಯನ್ನು ಭಗವಂತ ಎಲ್ಲರಿಗೂ ನೀಡಲಿ ಎಂದು ಪ್ರಾರ್ಥಿಸಿ ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಭೂತಲದಿನ್ನಿ ಗ್ರಾಮಸ್ಥರಾದ ಜಗನ್ನಾಥ ರೆಡ್ಡಿ, ಅಮರೇಗೌಡ, ಬಸವರಾಜ ಅಂಗಡಿ, ಶರಣಪ್ಪ, ಮುತ್ತನಗೌಡ, ಬಸಯ್ಯಸ್ವಾಮಿ, ರಹಿಮಾನ್ ಸಾಬ್, ಬಂದೇ ನವಾಜ್, ಖಾಜಾ ಹುಸೇನ್, ನಾಗರಾಜಸ್ವಾಮಿ, ಶೈಲಜಾ ಪಾಟೀಲ್, ನಾಗರಾಜ, ಕಾಳಿಂಗ ರೆಡ್ಡಿ, ಅಂಬಮ್ಮ, ರತ್ನಮ್ಮ, ಕಾಶಮ್ಮ, ಈರಮ್ಮ, ಯಂಕಮ್ಮ, ಮಹೇಶ್ವರಿ, ಅಮೃತ, ಪಾರ್ವತಮ್ಮ, ಮಹಾಂತಮ್ಮ, ಲಕ್ಷ್ಮಿ, ದೇವಮ್ಮ, ಗುಂಡಪ್ಪ, ಶರಣಯ್ಯಸ್ವಾಮಿ ಹಾಗೂ ಆಶ್ರಮದ ಕಾರ್ಯಾಧ್ಯಕ್ಷ ಡಾ. ಚನ್ನಬಸವಸ್ವಾಮಿ ಹಿರೇಮಠ, ಸದಸ್ಯೆ ಸುಜಾತ ಹಿರೇಮಠ, ಸಿಬ್ಬಂದಿಗಳಾದ ಸಿದ್ದಯ್ಯಸ್ವಾಮಿ, ಮರಿಯಪ್ಪ, ವಿದ್ಯಾಶ್ರೀ, ಶಂಕ್ರಮ್ಮ, ಶರಣುಸ್ವಾಮಿ, ಬಸವಸ್ವಾಮಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಡಾ. ಜನ್ಮಭೂಮಿ ನಾಗರಾಜ್ ಅವರಿಗೆ ಸನ್ಮಾನ: ಸಮಾಜಸೇವಾ ಚಟುವಟಿಕೆಗಳ ಕುರಿತು ಚರ್ಚೆ



ಬೆಂಗಳೂರು, ಅ.24: ಮಾನವ ಹಕ್ಕುಗಳ ರಕ್ಷಣೆ ಹಾಗೂ ಭ್ರಷ್ಟಾಚಾರ ನಿರ್ಮೂಲನಾ ಸೇವಾ ಸಮಿತಿಯ ರಾಜ್ಯ ಗೌರವಾಧ್ಯಕ್ಷ ಡಾ. ಜನ್ಮಭೂಮಿ ನಾಗರಾಜ್ ಅವರನ್ನು ರಾಯಚೂರು ಜಿಲ್ಲಾ ಯುವ ಘಟಕದ ಅಧ್ಯಕ್ಷ ಅಲ್ಲಾವಲಿ ಗಬ್ಬೂರು ಹಾಗೂ ಹಾಸನ್ ಚನ್ನೂರು ಕೆ. ಅವರು ಬೆಂಗಳೂರಿನಲ್ಲಿ ಭೇಟಿಯಾಗಿ ಸನ್ಮಾನಿಸಿ ಗೌರವಿಸಿದರು.

ಈ ಸಂದರ್ಭದಲ್ಲಿ ಸಮಿತಿಯ ಸಂಘಟನಾತ್ಮಕ ಚಟುವಟಿಕೆಗಳು, ಮಾನವ ಹಕ್ಕುಗಳ ರಕ್ಷಣೆ, ಭ್ರಷ್ಟಾಚಾರ ನಿರ್ಮೂಲನೆ ಹಾಗೂ ಸಮಾಜದ ವಿವಿಧ ವರ್ಗಗಳ ಜನರು ಎದುರಿಸುತ್ತಿರುವ ಸಮಸ್ಯೆಗಳಿಗೆ ಸ್ಪಂದಿಸುವ ಕುರಿತು ಚರ್ಚೆ ನಡೆಸಲಾಯಿತು. ಸಮಾಜದಲ್ಲಿ ಅನ್ಯಾಯಕ್ಕೊಳಗಾದವರಿಗೆ ನ್ಯಾಯ ಒದಗಿಸುವ ನಿಟ್ಟಿನಲ್ಲಿ ಸಮಿತಿಯ ಪದಾಧಿಕಾರಿಗಳು ಸಕ್ರಿಯವಾಗಿ ಕಾರ್ಯನಿರ್ವಹಿಸಬೇಕೆಂಬ ಅಭಿಪ್ರಾಯ ವ್ಯಕ್ತವಾಯಿತು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಡಾ. ಜನ್ಮಭೂಮಿ ನಾಗರಾಜ್ ಅವರು, ಸಮಿತಿಯ ಪ್ರತಿಯೊಬ್ಬ ಪದಾಧಿಕಾರಿಯೂ ಜನಸೇವೆಗೆ ಆದ್ಯತೆ ನೀಡಬೇಕು. ನಮ್ಮ ಸಂಘಟನೆಯ ಮೂಲಕ ಕನಿಷ್ಠ ನಾಲ್ಕು ಜನರಿಗಾದರೂ ನೆರವಾಗುವ ಕೆಲಸ ಮಾಡಬೇಕು. ಜನರ ಸಮಸ್ಯೆಗಳಿಗೆ ಸ್ಪಂದಿಸುವುದು ಮತ್ತು ಅವುಗಳ ಪರಿಹಾರಕ್ಕಾಗಿ ಪ್ರಾಮಾಣಿಕ ಪ್ರಯತ್ನ ನಡೆಸುವುದೇ ಸಮಿತಿಯ ಪ್ರಮುಖ ಉದ್ದೇಶವಾಗಿದೆ ಎಂದು ಹೇಳಿದರು.

ಮಾನವ ಹಕ್ಕುಗಳ ರಕ್ಷಣೆ ಕೇವಲ ಘೋಷಣೆಗೆ ಸೀಮಿತವಾಗದೆ ಕಾರ್ಯರೂಪಕ್ಕೆ ಬರಬೇಕು. ಸಮಾಜದಲ್ಲಿ ಅನ್ಯಾಯಕ್ಕೆ ಒಳಗಾದವರು ಹಾಗೂ ಸಂಕಷ್ಟದಲ್ಲಿರುವ ಜನರಿಗೆ ನೆರವಾಗುವ ಮೂಲಕ ಸಂಘಟನೆಯ ಉದ್ದೇಶವನ್ನು ಸಾಕಾರಗೊಳಿಸಬೇಕು. ಪದಾಧಿಕಾರಿಗಳು ಜನರೊಂದಿಗೆ ನಿರಂತರ ಸಂಪರ್ಕದಲ್ಲಿದ್ದು, ಅವರ ಸಮಸ್ಯೆಗಳನ್ನು ಅರಿತು ಪರಿಹಾರಕ್ಕೆ ಶ್ರಮಿಸಬೇಕು ಎಂದು ಸಲಹೆ ನೀಡಿದರು.

ಇದೇ ವೇಳೆ ಸಮಿತಿಯ ಮುಂದಿನ ಸೇವಾ ಚಟುವಟಿಕೆಗಳು ಹಾಗೂ ಸಂಘಟನೆಯನ್ನು ಮತ್ತಷ್ಟು ಬಲಪಡಿಸುವ ಕುರಿತು ವಿಚಾರ ವಿನಿಮಯ ನಡೆಸಲಾಯಿತು. ಜನಸೇವೆ ಮತ್ತು ನ್ಯಾಯದ ಪರವಾದ ಹೋರಾಟಕ್ಕೆ ಹೆಚ್ಚಿನ ಒತ್ತು ನೀಡುವ ಸಂಕಲ್ಪವನ್ನು ಪದಾಧಿಕಾರಿಗಳು ವ್ಯಕ್ತಪಡಿಸಿದರು.

# ಡಿ-82 ಉಪಕಾಲುವೆಗೆ 10 ದಿನ ನೀರು ಹರಿಸಲು ಆಗ್ರಹಿಸಿ ರೈತರ ಧರಣಿ



ಸಿರವಾರ, ಅ. 24: ತುಂಗಭದ್ರಾ ಎಡದಂಡೆ ಕಾಲುವೆಯ ಡಿಸ್ಟ್ರಿಬ್ಯೂಟರ್ ನಂ. 82ರ ಉಪಕಾಲುವೆಯ ಕೆಳಭಾಗದ ಜಮೀನುಗಳಿಗೆ ಸಮರ್ಪಕವಾಗಿ ನೀರು ಪೂರೈಸುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘದ ನೇತೃತ್ವದಲ್ಲಿ ರೈತರು ಧರಣಿ ಸತ್ಯಾಗ್ರಹ ನಡೆಸಿದರು.

ಡಿ-82 ಉಪಕಾಲುವೆಯ ಕೊನೆಯ ಭಾಗದ ರೈತರ ಜಮೀನುಗಳಿಗೆ ಅಗತ್ಯ ಪ್ರಮಾಣದಲ್ಲಿ ನೀರು ತಲುಪದ ಪರಿಣಾಮ ಜೋಳದ ಬೆಳೆ ಒಣಗುವ ಪರಿಸ್ಥಿತಿ ನಿರ್ಮಾಣವಾಗಿದೆ. ಬೆಳೆಗಳನ್ನು ರಕ್ಷಿಸಲು ಕೂಡಲೇ ನೀರು ಬಿಡುಗಡೆ ಮಾಡಿ, ಕನಿಷ್ಠ 10 ದಿನಗಳ ಕಾಲ ನಿರಂತರವಾಗಿ ನೀರು ಹರಿಸಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

ಪ್ರಸ್ತುತ ಜಾರಿಯಲ್ಲಿರುವ ಅವೈಜ್ಞಾನಿಕ ವಾರಬಂದಿ ಪದ್ಧತಿಯಿಂದ ಮೇಲ್ಭಾಗದ ರೈತರಿಗೆ ಹೆಚ್ಚಿನ ನೀರು ದೊರೆಯುತ್ತಿದ್ದು, ಕೆಳಭಾಗದ ರೈತರು ನೀರಿನ ಕೊರತೆ ಎದುರಿಸುತ್ತಿದ್ದಾರೆ ಎಂದು ರೈತ ಸಂಘದ ಮುಖಂಡರು ಆರೋಪಿಸಿದರು. ಅಚ್ಚುಕಟ್ಟು ಪ್ರದೇಶದ ಎಲ್ಲ ರೈತರಿಗೂ ಎಕರೆವಾರು ಸಮಾನವಾಗಿ ನೀರು ಹಂಚಿಕೆಯಾಗುವಂತೆ ವೈಜ್ಞಾನಿಕ ರೊಟೇಷನ್ ಪದ್ಧತಿಯನ್ನು ಜಾರಿಗೊಳಿಸಬೇಕು ಎಂದು ಒತ್ತಾಯಿಸಿದರು.

ಕಾಲುವೆಯಿಂದ ಅಕ್ರಮವಾಗಿ ನೀರು ಪಡೆಯುತ್ತಿರುವುದು, ದೊಡ್ಡ ಗಾತ್ರದ ಪೈಪುಗಳ ಮೂಲಕ ನೀರು ಬಳಸುತ್ತಿರುವುದು ಹಾಗೂ ಕಾಲುವೆಯಲ್ಲಿ ನೀರು ಸೋರಿಕೆಯಾಗುತ್ತಿರುವ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳು ಪರಿಶೀಲನೆ ನಡೆಸಬೇಕು. ಕೆಳಭಾಗದ ಜಮೀನುಗಳಿಗೆ ನೀರು ತಲುಪುವವರೆಗೆ ಮೇಲ್ಭಾಗದಲ್ಲಿ ನೀರಿನ ಬಳಕೆಯನ್ನು ನಿಯಂತ್ರಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಈ ಸಂಬಂಧ ಸಿರವಾರ ತಹಶೀಲ್ದಾರರ ಮೂಲಕ ರಾಯಚೂರು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದ ರೈತರು, ನೀರಾವರಿ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ವಾಸ್ತವ ಸ್ಥಿತಿಯನ್ನು ಪರಿಶೀಲಿಸಬೇಕು. ನೀರಿನ ಕೊರತೆಯಿಂದ ಒಣಗುತ್ತಿರುವ ಬೆಳೆಗಳನ್ನು ಉಳಿಸಲು ತುರ್ತು ಕ್ರಮ ಕೈಗೊಳ್ಳಬೇಕು. ಬೇಡಿಕೆಗಳಿಗೆ ಸ್ಪಂದಿಸದಿದ್ದರೆ ಮುಂದಿನ ದಿನಗಳಲ್ಲಿ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು ಎಂದು ಎಚ್ಚರಿಸಿದರು.

ಧರಣಿಯಲ್ಲಿ ಕರ್ನಾಟಕ ರಾಜ್ಯ ರೈತ ಸಂಘದ ಜಿಲ್ಲಾಧ್ಯಕ್ಷ ಪ್ರಭಾಕರ ಪಾಟೀಲ್ ಇಂಗಳದಾಳ, ರಾಜ್ಯ ಕಾರ್ಯದರ್ಶಿ ಸೂರುರಯ್ಯ ಆರ್.ಎಸ್. ಮಠ, ಯಂಕಪ್ಪ ಕಾರಬಾರಿ, ದೊಡ್ಡಬಸನಗೌಡ, ಪ್ರಭಾಕರ ಪಾಟೀಲ್, ಜಿಲ್ಲಾ ಕಾರ್ಯಾಧ್ಯಕ್ಷ ಬಸವರಾಜ ಮಾ.ಪಾ., ಲಿಂಗರೆಡ್ಡಿ ಪಾಟೀಲ್, ಬೂದಯ್ಯಸ್ವಾಮಿ, ಎ. ಗೋವಿಂದಪ್ಪ ನಾಯಕ, ಜಿಲ್ಲಾ ಉಪಾಧ್ಯಕ್ಷ ಹನುಮನಗೌಡ ಜಾಲಹಳ್ಳಿ, ವೀರೇಶ ಗವಿಗಟ್ಟು, ಸಿದ್ದಯ್ಯಸ್ವಾಮಿ ಗೊರ್ಕಲ್, ದೇವೇಂದ್ರಪ್ಪ ನಾಯಕ, ಶಂಕ್ರಪ್ಪ ದೇವತಗಲ್, ಹಾಜಿಮಸ್ತಾನ್, ದೇವರಾಜ ನಾಯಕ, ಸಿರವಾರ ತಾಲೂಕು ಅಧ್ಯಕ್ಷ ಶಂಕ್ರಪ್ಪ ದೇವತಗಲ್, ತಾಲೂಕು ಪದಾಧಿಕಾರಿ ಬಸವರಾಜ ನವಲಕಲ್, ಜಿಲ್ಲಾ ಮುಖಂಡ ದೊ. ದೇವೇಂದ್ರಪ್ಪ ನಾಯಕ, ಲಿಂಗಸುಗೂರು ತಾಲೂಕು ಅಧ್ಯಕ್ಷ ಮಲ್ಲನಗೌಡ ಸೇರಿದಂತೆ ಹಲವಾರು ರೈತರು ಪಾಲ್ಗೊಂಡಿದ್ದರು.

# ಎಸ್‌ಐಆರ್ ಪ್ರಕ್ರಿಯೆ ವಿರೋಧಿಸಿ ಮಾನ್ವಿಯಲ್ಲಿ ಸಂವಿಧಾನ ನಡಿಗೆ ಜಾಗೃತಿ ಜಾಥಾ




ಮಾನ್ವಿ: ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯನ್ನು ವಿರೋಧಿಸಿ ಹಾಗೂ ಪ್ರಜಾಪ್ರಭುತ್ವದ ರಕ್ಷಣೆಗೆ ಆಗ್ರಹಿಸಿ ತಾಲೂಕಿನ ವಿವಿಧ ಪ್ರಗತಿಪರ ಸಂಘಟನೆಗಳ ನೇತೃತ್ವದಲ್ಲಿ ಪಟ್ಟಣದಲ್ಲಿ ಸಂವಿಧಾನ ನಡಿಗೆ ಜಾಗೃತಿ ಜಾಥಾ ನಡೆಸಲಾಯಿತು.

ಪಟ್ಟಣದ ಡಾ.ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ಜಾಥಾಕ್ಕೆ ಚಾಲನೆ ನೀಡಿ ಮಾತನಾಡಿದ ಸಿಐಟಿಯು ಮುಖಂಡ ಟಿ.ಎಚ್. ಶರ್ಫುದ್ದೀನ್ ಪೋತ್ನಾಳ, ಭಾರತದ ಸಂವಿಧಾನವು ಪ್ರತಿಯೊಬ್ಬ ಅರ್ಹ ನಾಗರಿಕನಿಗೂ ಮತದಾನದ ಹಕ್ಕನ್ನು ಕಲ್ಪಿಸಿದೆ. ಆದರೆ, ಕೇಂದ್ರ ಚುನಾವಣಾ ಆಯೋಗವು ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆಯ ನೆಪದಲ್ಲಿ ಕೋಟ್ಯಂತರ ಅರ್ಹ ಮತದಾರರನ್ನು ಮತದಾನದ ಹಕ್ಕಿನಿಂದ ವಂಚಿಸುವ ಪ್ರಯತ್ನ ನಡೆಸುತ್ತಿದೆ ಎಂದು ಆರೋಪಿಸಿದರು.

ಮತದಾನದ ಹಕ್ಕು ಪ್ರಜಾಪ್ರಭುತ್ವದ ಮೂಲಾಧಾರವಾಗಿದ್ದು, ಯಾವುದೇ ಕಾರಣಕ್ಕೂ ಅರ್ಹ ಮತದಾರರು ತಮ್ಮ ಹಕ್ಕಿನಿಂದ ವಂಚಿತರಾಗಬಾರದು. ಮತದಾರರ ಪಟ್ಟಿಯ ಪರಿಷ್ಕರಣೆ ಹೆಸರಿನಲ್ಲಿ ಸಾಮಾನ್ಯ ಜನರ ಮತದಾನದ ಹಕ್ಕಿಗೆ ಧಕ್ಕೆಯಾಗುವಂತಹ ಕ್ರಮಗಳನ್ನು ಕೈಗೊಳ್ಳಬಾರದು. ಚುನಾವಣಾ ಆಯೋಗವು ಕೂಡಲೇ ಎಸ್‌ಐಆರ್ ಪ್ರಕ್ರಿಯೆಯನ್ನು ಕೈಬಿಟ್ಟು ಎಲ್ಲ ಅರ್ಹ ಮತದಾರರ ಹಕ್ಕುಗಳನ್ನು ರಕ್ಷಿಸಲು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಪ್ರಜಾಪ್ರಭುತ್ವ ಹಾಗೂ ಸಂವಿಧಾನದ ಆಶಯಗಳನ್ನು ಕಾಪಾಡುವುದು ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿಯಾಗಿದೆ. ಮತದಾನದ ಹಕ್ಕಿನ ರಕ್ಷಣೆಗಾಗಿ ಪ್ರಗತಿಪರ ಸಂಘಟನೆಗಳು ಹೋರಾಟ ಮುಂದುವರಿಸಲಿವೆ ಎಂದು ಎಚ್ಚರಿಸಿದರು.

ಬಳಿಕ ಡಾ.ಬಿ.ಆರ್. ಅಂಬೇಡ್ಕರ್ ವೃತ್ತದಿಂದ ಬಸವ ವೃತ್ತದವರೆಗೆ ವಿವಿಧ ಪ್ರಗತಿಪರ ಸಂಘಟನೆಗಳ ಮುಖಂಡರು ಹಾಗೂ ಕಾರ್ಯಕರ್ತರು ಸಂವಿಧಾನ ನಡಿಗೆ ಜಾಗೃತಿ ಜಾಥಾ ನಡೆಸಿ ಎಸ್‌ಐಆರ್ ಪ್ರಕ್ರಿಯೆಗೆ ವಿರೋಧ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಎಂ.ಆರ್. ಬೇರಿ, ಮಾರಪ್ಪ ಹರವಿ, ಶರಣಕುಮಾರ ಮುದ್ದಮಗುಡ್ಡಿ, ಅಮರೇಶಪ್ಪ ಗವಿಗಟ್ಟ, ತಿಪ್ಪಣ್ಣ ಬಾಗಲವಾಡ, ರವೀಂದ್ರ ಜಾನೇಕಲ್, ಹನುಮಂತ ಕೋಟೆ, ಹನುಮಂತ ಗುಂಜಳ್ಳಿ, ಜಿಶಾನ್ ಅಖಿಲ್ ಸಿದ್ದಿಖಿ, ಕರೀಂ ಸಾಬ್, ನಾಸಿರ್ ಅಲಿ, ವಿಜಯರಾಣಿ ಸಿರವಾರ, ಸಹಾರ ಬೇಗಂ, ಕೊಂಡಯ್ಯ, ಹುಚ್ಚಪ್ಪ ಕುರುಡಿ, ಯಲ್ಲಪ್ಪ ಬಾದರದಿನ್ನಿ, ನಾಗವೇಣಿ, ರುದ್ರಪ್ಪ ನಾಯಕ, ಆಂಜನೇಯ್ಯ ಕೋಟೆ ಸೇರಿದಂತೆ ವಿವಿಧ ಸಂಘಟನೆಗಳ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.

# ರೈತಕೂಲಿಕಾರರ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ದೇವದುರ್ಗದಿಂದ ಪಾದಯಾತ್ರೆ ಆರಂಭ

ದೇವದುರ್ಗ, ಅ.24: ರೈತರು, ಕೃಷಿ ಕೂಲಿಕಾರರು ಹಾಗೂ ಗ್ರಾಮೀಣ ಕಾರ್ಮಿಕರು ಎದುರಿಸುತ್ತಿರುವ ವಿವಿಧ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸುವಂತೆ ಒತ್ತಾಯಿಸಿ ಕರ್ನಾಟಕ ಪ್ರಾಂತ ರೈತ ಸಂಘ (ಕೆಪಿಆರ್ ಎಸ್) ಹಾಗೂ ಕರ್ನಾಟಕ ರಾಜ್ಯ ಕೃಷಿ ಕೂಲಿಕಾರರ ಮತ್ತು ಗ್ರಾಮೀಣ ಕಾರ್ಮಿಕರ ಸಂಘ (ಎಐಎಡಬ್ಲ್ಯುಯು) ನೇತೃತ್ವದಲ್ಲಿ ದೇವದುರ್ಗದಿಂದ ರಾಯಚೂರಿನತ್ತ ಪಾದಯಾತ್ರೆ ಆರಂಭಿಸಲಾಯಿತು.

ಪಟ್ಟಣದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪ್ರಗತಿಪರ ಚಿಂತಕ ಹಾಗೂ ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕು ಅಧ್ಯಕ್ಷ ನರ್ಸಿಂಗ್ ರಾವ್ ಸರ್ಕಿಲ್, ಪ್ರಧಾನ ಕಾರ್ಯದರ್ಶಿ ನಾಗರಾಜ ತೇಲ್ಕರ್ ಮತ್ತು ಸಿಐಟಿಯು ಮುಖಂಡ ಶಬ್ಬೀರ್ ಮಾಲಾರ್ಪಣೆ ಮಾಡುವ ಮೂಲಕ ಪಾದಯಾತ್ರೆಗೆ ಚಾಲನೆ ನೀಡಿದರು.

ಜಿಲ್ಲೆಯ ವಿವಿಧ ತಾಲೂಕುಗಳಿಂದ ಅ.24ರಂದು ಆರಂಭಗೊಂಡಿರುವ ಪಾದಯಾತ್ರೆಗಳು ಅ.27ರಂದು ರಾಯಚೂರು ತಲುಪಲಿದ್ದು, ಅಂದು ಜಿಲ್ಲಾಧಿಕಾರಿ ಕಚೇರಿ ಎದುರು ಬೃಹತ್ ಧರಣಿ ಸತ್ಯಾಗ್ರಹ ನಡೆಸಲು ಸಂಘಟನೆಗಳು ನಿರ್ಧರಿಸಿವೆ.

ಬರದಿಂದ ಬೆಳೆ ನಷ್ಟ ಅನುಭವಿಸಿರುವ ರೈತರಿಗೆ ಎಕರೆಗೆ ₹50 ಸಾವಿರ ಪರಿಹಾರ ನೀಡಬೇಕು. ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಸಮರ್ಪಕವಾಗಿ ಕೆಲಸ ಒದಗಿಸಿ, ಬಾಕಿ ಉಳಿದಿರುವ ಕೂಲಿ ಹಣವನ್ನು ತಕ್ಷಣ ಪಾವತಿಸಬೇಕು. ಅರ್ಹ ಕುಟುಂಬಗಳಿಗೆ ಪಡಿತರ ಚೀಟಿ ವಿತರಿಸಿ, ಪ್ರತಿ ಕುಟುಂಬಕ್ಕೆ 50 ಕೆ.ಜಿ. ದವಸಧಾನ್ಯ ಒದಗಿಸಬೇಕು ಎಂದು ಒತ್ತಾಯಿಸಲಾಗಿದೆ.

ಅಲ್ಲದೆ, ಸ್ಥಗಿತಗೊಂಡಿರುವ ಪಿಂಚಣಿ ಬಿಡುಗಡೆ ಮಾಡಬೇಕು. ಭೂರಹಿತ ಕೃಷಿ



ಕೂಲಿಕಾರರಿಗೆ ಸಾಗುವಳಿ ಭೂಮಿ ಹಕ್ಕುಪತ್ರ, ವಸತಿ ರಹಿತರಿಗೆ ಮನೆ ಹಾಗೂ ನಿವೇಶನ ಕಲ್ಪಿಸಬೇಕು. ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ನಿವಾರಿಸಬೇಕು. ಜೋಳ ಖರೀದಿ ಕೇಂದ್ರಗಳನ್ನು ಸಮರ್ಪಕವಾಗಿ ನಿರ್ವಹಿಸಬೇಕು ಎಂದು ಆಗ್ರಹಿಸಲಾಗಿದೆ.

ರೈತರಿಗೆ ಬಾಕಿ ಇರುವ ಬೆಳೆ ವಿಮೆ ಪರಿಹಾರ ಪಾವತಿಸುವುದು, ಕೃಷಿ ಪಂಪ್ ಸೆಟ್‌ಗಳಿಗೆ ಸಮರ್ಪಕ ವಿದ್ಯುತ್ ಪೂರೈಕೆ, ದಲಿತರು ಹಾಗೂ ಮಹಿಳೆಯರ ಮೇಲಿನ ದೌರ್ಜನ್ಯ ಪ್ರಕರಣಗಳನ್ನು ಸಿಐಡಿ ತನಿಖೆಗೆ ವಹಿಸುವುದು ಮತ್ತು ಎಸ್‌ಐಆರ್ ಪ್ರಕ್ರಿಯೆ ರದ್ದುಗೊಳಿಸುವುದು ಸೇರಿದಂತೆ ಹಲವು ಬೇಡಿಕೆಗಳನ್ನು ಸಂಘಟನೆಗಳು ಮುಂದಿಟ್ಟಿವೆ.

ಪಾದಯಾತ್ರೆಯಲ್ಲಿ ಸಂಘದ ತಾಲೂಕು ಕಾರ್ಯದರ್ಶಿ ಮೌನೇಶ ಜಾಲಹಳ್ಳಿ, ಮುಖಂಡರಾದ ಹನುಮಂತ ಮಂಡಲಗುಡ್ಡ, ಹನುಮಂತ ಮಡಿವಾಳ, ರಂಗನಾಥ ಬುಂಕಲದೊಡ್ಡಿ, ಸುರೇಶಗೌಡ, ತಮ್ಮಣ್ಣ, ನರಸಪ್ಪ, ಬಸವರಾಜ ಲಿಂಗದಹಳ್ಳಿ, ಅಬ್ರಾಂ, ಬಸವರಾಜ ವಂದ್ಲಿ, ಶಿವಪ್ಪ ಚಿಂಚರಕಿ, ಮುಕ್ಕನಗೌಡ ಪಾಲ್ಗೊಂಡಿದ್ದರು.

ಡಿವೈಎಫ್‌ಐ ಹಾಗೂ ಎಸ್‌ಎಫ್‌ಐ ಮುಖಂಡರಾದ ರಾಜು ನಾಯಕ, ಮಾಹಲಿಂಗ ದೊಡ್ಡಮನಿ, ವೆಂಕಟೇಶ ತ್ಯಾಪ್ಲಿ, ಮಲ್ಲಯ್ಯ ಗೌಡೂರು, ಕೊಂಡಯ್ಯ, ಸಂತೋಷ ತ್ಯಾಪ್ಲಿ, ದಿಲ್‌ಶಾದ್, ನಿಂಗಯ್ಯ ಸೇರಿದಂತೆ ವಿವಿಧ ಸಂಘಟನೆಗಳ ಪದಾಧಿಕಾರಿಗಳು ಮತ್ತು ಕಾರ್ಯಕರ್ತರು ಭಾಗವಹಿಸಿದ್ದರು.

ರೈತರು, ಕೃಷಿ ಕೂಲಿಕಾರರು ಹಾಗೂ ಗ್ರಾಮೀಣ ಕಾರ್ಮಿಕರು ಹೆಚ್ಚಿನ ಸಂಖ್ಯೆಯಲ್ಲಿ ಅ.27ರಂದು ರಾಯಚೂರಿನಲ್ಲಿ ನಡೆಯಲಿರುವ ಧರಣಿ ಸತ್ಯಾಗ್ರಹದಲ್ಲಿ ಪಾಲ್ಗೊಂಡು ಹೋರಾಟವನ್ನು ಯಶಸ್ವಿಗೊಳಿಸಬೇಕೆಂದು ಸಂಘಟನೆಗಳ ಮುಖಂಡರು ಕರೆ ನೀಡಿದರು.

ಸಂಪರ್ಕಿಸಿ
ನಿಮ ವಿಶ್ವಾಸ ಅರ್ಹ ಪತ್ರಿಕೆಯ
ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
98863 85685 tungabimba@gmail.com

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K